ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 308
3–6–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 308

ಪೌರಾಡಳಿತ ಮತ್ತು ಹಜ್ ಸಚಿವರ ಜಿಲ್ಲಾ ಪ್ರವಾಸ

ದಾವಣಗೆರೆ : ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂಖಾನ್ ಅವರು ಜೂನ್ 4 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಜೂನ್ 4 ರಂದು ಮಧ್ಯಾಹ್ನ 12.30ಕ್ಕೆ ದಾವಣಗೆರೆ ಆಗಮಿಸಿ, ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 1 ಗಂಟೆಗೆ ಜಿಲ್ಲೆಯ ಇಂದಿರಾ ಕ್ಯಾಂಟೀನ್, ಘನತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡುವರು. ಮ.2 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 4.30ಕ್ಕೆ ದಾವಣಗೆರೆಯಿಂದ ತೆರಳುವರೆಂದು ಪ್ರಕಟಣೆ ತಿಳಿಸಿದೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ದಾವಣಗೆರೆ: ನಗರದ ಶ್ರೀಅಕ್ಕಮಹಾದೇವಿ ಸಮಾಜದ ಶ್ರೀಅಕ್ಕಮಹಾದೇವಿ ಸಹಾಯ ನಿಧಿ ಉಪಸಮಿತಿ ವತಿಯಿಂದ 2024–25ನೇ ವರ್ಷದ ಪ್ರತಿಭಾ ಪುರಸ್ಕಾರ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರಿ ಮತ್ತು ಅನುದಾನರಹಿತ ಗ್ರಾಮಾಂತರ ವಿದ್ಯಾರ್ಥಿಗಳು 2024–25ನೇ ಸಾಲಿನ ಎಸ್ಎಸ್ಎಲ್ಸಿಯಲ್ಲಿ ಶೇ 85ಕ್ಕಿಂತ ಅಧಿಕ ಅಂಕ ಪಡೆದು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಅಧಿಕ ಅಂಕ ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ನಿಗದಿತ ಅರ್ಜಿ ಪಡೆದು ಪೂರ್ಣ ವಿವರಗಳೊಂದಿಗೆ ಜೂನ್ 14ರೊಳಗೆ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿಯೊಂದಿಗೆ ಉತ್ತೀರ್ಣರಾದ ಪ್ರಮಾಣಪತ್ರ ಮತ್ತು ಉನ್ನತ ಶಿಕ್ಷಣಕ್ಕೆ ದಾಖಲಾದ ಶಾಲಾ ಕಾಲೇಜುಗಳಿಂದ ಶಿಫಾರಸ್ಸು ಮಾಡಿಸಿ ಮೇಲಿನ ವಿಳಾಸಕ್ಕೆ ಅರ್ಜಿ ಸಲ್ಲಿಸತಕ್ಕದ್ದು ಎಂದು ಕಾರ್ಯದರ್ಶಿ ಡಿ.ಸುವರ್ಣಮ್ಮ ತಿಳಿಸಿದ್ದಾರೆ.

ಲೈಂಗಿಕ ಕ್ರಿಯೆಗೆ ನಿರಾಕರಿಸಿದ ಪತ್ನಿ: ಬೆಂಕಿ ಹಚ್ಚಿ, ಪತಿಯಿಂದ ಅಮಾನುಷ ಕೃತ್ಯ!

ಮುಂಬೈ: ಹೆಂಡತಿ ಲೈಂಗಿಕ ಕ್ರಿಯೆಗೆ ಸಹಕರಿಸಿಲ್ಲ ಎಂದು ತನ್ನ ಹೆಂಡತಿಗೆ ಬೆಂಕಿ ಹಚ್ಚಿದ ಘಟನೆ ಚೆಂಬೂರ್ ಪ್ರದೇಶದಲ್ಲಿ ನಡೆದಿದೆ. ಆರೋಪಿಯನ್ನು ಬಂಧಿಸಲಾಗಿದ್ದು, ಸಂತ್ರಸ್ತೆಗೆ ಸುಟ್ಟ ಗಾಯಗಳಾಗಿರುವ ಹಿನ್ನೆಲೆ ಆಸ್ಪತ್ರೆಗೆ ಸೇರಿಸಲಾಗಿದೆ.

46 ವರ್ಷದ ದಿನೇಶ್ ಅವ್ಹಾದ್ ತನ್ನ ಹೆಂಡತಿಯೊಂದಿಗೆ ಲೈಂಗಿಕ ಕ್ರಿಯೆ ನಡೆಸಲು ಬಯಸಿದ್ದನು. ಆದರೆ ಆಕೆ ಕೆಲಸಕ್ಕೆ ಹೋಗಲು ತಡವಾಗುತ್ತಿದೆ ಎಂದು ಹೇಳಿ ನಿರಾಕರಿಸಿದಳು. ಇದರಿಂದ ಕುಪಿತಗೊಂಡ ಆತ ಜಗಳ ತೆಗೆದಿದ್ದಾನೆ. ಗಲಾಟೆ ತಾರಕ್ಕೇರಿ ಸೀಮೆಎಣ್ಣೆ ಸುರಿದು ಬೆಂಕಿ ಹಚ್ಚಿದ್ದಾನೆ ಎಂದು ಆರ್ಸಿಎಫ್ ಪೊಲೀಸ್ ಠಾಣೆಯ ಅಧಿಕಾರಿಗಳು ತಿಳಿಸಿದ್ದಾರೆ.

ಸೀಮೆಎಣ್ಣೆ ಸುರಿದು ಬೆಂಕಿಹಚ್ಚಿ ಕೃತ್ಯ: ಪೊಲೀಸರ ಪ್ರಕಾರ, ಸಂತ್ರಸ್ತ ಮಹಿಳೆ ಮನೆ ಕೆಲಸ ಮಾಡುತ್ತಿದ್ದಳು. ಲೈಂಗಿಕ ಕ್ರಿಯೆಗೆ ನಿರಾಕರಿಸಿದ ಕಾರಣ ಜಗಳವಾಗಿದೆ. ಜಗಳದ ಮಧ್ಯೆ ಆಕೆ ಸೀಮೆಎಣ್ಣೆ ಸುರಿದುಕೊಂಡಿದ್ದಾಳೆ. ಬೆಂಕಿ ಹಚ್ಚಲು ಸಾಧ್ಯವಾಗದಿದ್ದಾಗ, ದಿನೇಶ್ ಗ್ಯಾಸ್ ಸ್ಟವ್‌ನಿಂದ ಕಾಗದಕ್ಕೆ ಬೆಂಕಿ ಹಚ್ಚಿ ಆಕೆಯ ಮೇಲೆ ಎಸೆದಿದ್ದಾನೆ. ಇದರಿಂದ ಆಕೆಗೆ ಗಂಭೀರ ಗಾಯಗಳಾಗಿವೆ. ಆಕೆಯನ್ನು ಸಿಯೋನ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಲೈಂಗಿಕ ಕ್ರಿಯೆಗೆ ನಿರಾಕರಿಸಿದ ಕಾರಣ ಜಗಳವಾಗಿದೆ. ಜಗಳದ ಮಧ್ಯೆ ಆಕೆ ಸೀಮೆಎಣ್ಣೆ ಸುರಿದುಕೊಂಡಿದ್ದಾಳೆ. ಬೆಂಕಿ ಹಚ್ಚಲು ಸಾಧ್ಯವಾಗದಿದ್ದಾಗ, ಅವ್ಹಾದ್ ಗ್ಯಾಸ್ ಸ್ಟವ್‌ನಿಂದ ಕಾಗದಕ್ಕೆ ಬೆಂಕಿ ಹಚ್ಚಿ ಆಕೆಯ ಮೇಲೆ ಎಸೆದಿದ್ದಾನೆ. ಆಕೆಗೆ ಗಂಭೀರ ಗಾಯಗಳಾಗಿವೆ" ಎಂದು ಪೊಲೀಸ್ ಅಧಿಕಾರಿ ಹೇಳಿದ್ದಾರೆ.

ಭೂಕುಸಿತ ನಂತರ, ಪಶ್ಚಿಮ ಘಟ್ಟಗಳ 'ನಿಭಾಯಿಸುವ ಸಾಮರ್ಥ್ಯ' ಅಧ್ಯಯನ: ಸಚಿವ ಈಶ್ವರ ಖಂಡ್ರೆ ಆದೇಶ

ಬೆಂಗಳೂರು: ದಕ್ಷಿಣ ಕನ್ನಡ, ಕೊಡಗು ಮತ್ತು ಕರ್ನಾಟಕದ ಇತರ ಭಾಗಗಳಲ್ಲಿ ಇತ್ತೀಚೆಗೆ ಮುಂಗಾರು ಪೂರ್ವ ಮಳೆಯ ಸಮಯದಲ್ಲಿ ಸಂಭವಿಸಿದ ಭೂಕುಸಿತ ಹಿನ್ನೆಲೆಯಲ್ಲಿ ಅರಣ್ಯ, ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಅವರು ಪಶ್ಚಿಮ ಘಟ್ಟಗಳ ನಿರ್ವಹಣೆ ಸಾಮರ್ಥ್ಯವನ್ನು ನಿರ್ಣಯಿಸಿ ಮೂರು ತಿಂಗಳೊಳಗೆ ವಿವರವಾದ ವರದಿಯ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಾತಿ ಸಮೀಕ್ಷೆ ಮಹತ್ವದ ಕಾಲಘಟ್ಟ: ಹೆಚ್.ಆಂಜನೇಯ

ಚಿತ್ರದುರ್ಗ: ಒಳಮೀಸಲಾತಿ ಜಾರಿಗಾಗಿ ರಾಜ್ಯದಲ್ಲಿ ಕೈಗೊಂಡಿರುವ ಸರ್ವೇ ಕಾರ್ಯ ಅವಧಿಯನ್ನು ಮತ್ತೇ ವಿಸ್ತರಿಸಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮಾಜಿ ಸಚಿವ ಹೆಚ್.ಆಂಜನೇಯ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಭಾನುವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ರಾಜ್ಯಾದ್ಯಂತ ನಾನು ಸೇರಿ ಅನೇಕ ಮುಖಂಡರು, ಸಂಘಟನೆಗಳು ಪದಾಧಿಕಾರಿಳು ಸುತ್ತಾಡಿದ್ದು, ಮಾದಿಗ ಸಮುದಾಯದಲ್ಲಿ ಜಾತಿಸಮೀಕ್ಷೆಯಲ್ಲಿ ಪಾಲ್ಗೊಳ್ಳುವಂತೆ ಜಾಗೃತಿ ಮೂಡಿಸಿದ್ದೇವೆ. ಆದರೂ ಬಹಳಷ್ಟು ಮಂದಿ ಹೊರಗುಳಿದಿದ್ದಾರೆ ಎಂದರು.

ಈ ಕಾರಣಕ್ಕೆ ಮತ್ತೇ ಸರ್ವೇ ಅವಧಿಯನ್ನು ಜೂ.8ರ ವರೆಗೆ ವಿಸ್ತರಿಸಿದ್ದು, ಈ ಅವಧಿಯೊಳಗೆ ಪರಿಶಿಷ್ಟ ಜಾತಿಯಲ್ಲಿನ ಪ್ರತಿಯೊಬ್ಬರೂ ನೋಂದಣಿ ಮಾಡಿಕೊಳ್ಳಬೇಕು. ಆಗ ತಾನೇ ಹುಟ್ಟಿದ ಮಗುವನ್ನು ಕೂಡ ನೋಂದಣಿ ಮಾಡಿಕೊಳ್ಳುವ ಅವಕಾಶ ನೀಡಲಾಗಿದೆ ಎಂದು ಹೇಳಿದರು.

ಮೇ 5ರಂದು ಆರಂಭಗೊಂಡ ಸಮೀಕ್ಷೆ ಆರಂಭದಲ್ಲಿ ಕುಂಟುತ್ತಾ, ಬಳಿಕ ವೇಗ ಪಡೆದುಕೊಂಡಿದೆ. ಆದರೆ, ಬೆಂಗಳೂರು ಪ್ರದೇಶದಲ್ಲಿ ಬಹಳಷ್ಟು ಮಂದಗತಿಯಲ್ಲಿ ಸಾಗುತ್ತಿದೆ. ಈ ಪ್ರದೇಶದಲ್ಲಿ ಹೆಚ್ಚು ಜಾಗೃತಿ ಜೊತೆಗೆ ಗಣತಿದಾರರು ಶ್ರಮವಹಿಸಿ ಬದ್ಧತೆಯಿಂದ ಕಾರ್ಯನಿರ್ವಹಿಸಬೇಕಿದೆ ಎಂದರು.

ಇಲ್ಲಿಯವರೆಗೂ 1.4 ಕೋಟಿ ಜನರು ಸರ್ವೇ ಕಾರ್ಯದಲ್ಲಿ ಪಾಲ್ಗೊಂಡಿದ್ದು, ಇನ್ನೂ ಬಹಳಷ್ಟು ಮಂದಿ ಹೊರಗುಳಿದಿದ್ದಾರೆ. ಇವರೆಲ್ಲರೂ ನೋಂದಣಿ ಮಾಡಿಕೊಂಡಲ್ಲಿ ಮಾತ್ರ ಮೀಸಲಾತಿಯಲ್ಲಿ ನ್ಯಾಯಯುತವಾಗಿ ತಮ್ಮ ಪಾಲನ್ನು ಪಡೆಯಲು ಸಾಧ್ಯ ಎಂದು ಹೇಳಿದರು. ಒಳಮೀಸಲಾತಿ ಜಾರಿ ಬಳಿಕ ಎಕೆ, ಎಡಿ, ಆದಿಆಂಧ್ರ ಪದಗಳೇ ಇರುವುದಿಲ್ಲ. ಆಗ ಮೂಲ ಜಾತಿ ಆಧಾರದ ಮೇಲೆ ಮೀಸಲಾತಿ ದೊರೆಯಲಿದೆ. ಆದ್ದರಿಂದ ಜಾತಿಗಣತಿ ಸಮೀಕ್ಷೆ ಮಹತ್ವದ ಕಾಲಘಟ್ಟವಾಗಿದ್ದು, ಇದರಲ್ಲಿ ಪಾಲ್ಗೊಳ್ಳುವ ಮೂಲಕ ಮೀಸಲು ಹಕ್ಕು ಪಡೆದುಕೊಳ್ಳಬೇಕು ಎಂದರು. ಬೆಂಗಳೂರಿನ ಬಹಳಷ್ಟು ಸ್ಲಂ ಪ್ರದೇಶದಲ್ಲಿ ಕೂಲಿಗಾರರೇ ಹೆಚ್ಚು. ಗಣ–

ತಿದಾರರು ಮನೆ ಬಾಗಿಲಿಗೆ ಬರುವ ವೇಳೆಗೆ ಕೆಲಸಕ್ಕೆ ಹೋಗಿರುತ್ತಾರೆ, ಇನ್ನೂ ಪ್ರತಿಷ್ಠಿತ ಬಡಾವಣೆಗಳಲ್ಲಿ ಸಾಮಾಜಿಕ ಸಮಸ್ಯೆ ಕಾರಣಕ್ಕೆ ನೋಂದಣಿ ಕಾರ್ಯದಲ್ಲಿ ಪಾಲ್ಗೊಳ್ಳುತ್ತಿಲ್ಲ. ಈ ಎಲ್ಲ ಸಮಸ್ಯೆಗಳನ್ನು ಸಮರ್ಥವಾಗಿ ನಿಭಾಯಿಸಬೇಕಿದೆ. ಈಗಾಗಲೇ ನಾವೆಲ್ಲರೂ ಗಣತಿದಾರರ ಜೊತೆ ಮನೆ ಮನೆಗೆ ಭೇಟಿ ನೀಡಿ, ಜಾಗೃತಿ ಜೊತೆಗೆ ನೋಂದಣಿ ಮಾಡಿಸುವ ಕೆಲಸ ಮಾಡಲಾಗಿದೆ. ಆದರೂ ಮಂದಗತಿಯಲ್ಲಿ ಸಾಗುತ್ತಿದೆ ಎಂದು ಹೇಳಿದರು.

ಕೆಲ ಪಡಿತರ ಚೀಟಿಯಲ್ಲಿ ಎಸ್ಸಿ ಸಮುದಾಯವರನ್ನು ಎಸ್ಟಿ ಎಂದು ನಮೋದಿಸಿರುವುದು ಕೂಡ ಸಮಸ್ಯೆ ಆಗಿದೆ. ಈ ಸಂಬಂಧ ಆಯೋಗಕ್ಕೆ ದೂರು ನೀಡಿದ್ದು, ತಕ್ಷಣ ಸರಿಪಡಿಸುವುದಾಗಿ ಭರವಸೆ ನೀಡಿದ್ದಾರೆ. ಜೊತೆಗೆ ಇಂತಹ ಪ್ರಕರಣಗಳ ಕುರಿತು ಸ್ಥಳೀಯವಾಗಿ ಸಮಾಜ ಕಲ್ಯಾಣ ಇಲಾಖೆಗೆ ದೂರು ನೀಡುತ್ತಿದ್ದಂತೆ ಅವರೇ ಸಮಸ್ಯೆ ಪರಿಹರಿಸಲಿದ್ದಾರೆ ಎಂದರು.

ಸರ್ಕಾರದ 36 ಇಲಾಖೆ ಹಾಗೂ ವಿಶ್ವವಿದ್ಯಾಲಯ ಸೇರಿ ಅನೇಕ ಅಂಗ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಜಾತಿವಾರು ಮಾಹಿತಿಯನ್ನು ನ್ಯಾ.ನಾಗಮೋಹನ್ ದಾಸ್ ಆಯೋಗ, ಸರ್ಕಾರ ಕೇಳಿದ್ದರೂ ಇಲ್ಲಿಯವರೆಗೂ ಮಾಹಿತಿ ನೀಡಿಲ್ಲ. ಈ ಸಂಬಂಧ ತಕ್ಷಣ ಅಂತಹ ಅಧಿಕಾರಿಗಳಿಗೆ ಶಿಸ್ತುಕ್ರಮ ಕೈಗೊಳ್ಳುವುದಾಗಿ ನೋಟಿಸ್ ಜಾರಿ ಮಾಡಬೇಕು. ಆಗ ಮಾತ್ರ ಸ್ಪಷ್ಟ ಮಾಹಿತಿ ದೊರೆಯಲಿದೆ ಎಂದು ತಿಳಿಸಿದರು.

ಸರ್ಕಾರಿ ಉದ್ಯೋಗದಲ್ಲಿ ಶೇ.1ರಷ್ಟು ಮಾತ್ರ ಮಾದಿಗರು ಅವಕಾಶ ಪಡೆದು–ಕೊಂಡಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಪೌರಕಾರ್ಮಿಕರಾಗಿದ್ದಾರೆ. ಈ ಎಲ್ಲ ಮಾಹಿತಿ ಪಡೆದುಕೊಂಡರೇ ಮೀಸಲಾತಿ ಹಂಚಿಕೆ ಮಾಡಲು ಹೆಚ್ಚು ಅನುಕೂಲ ಆಗಲಿದೆ ಎಂದರು.

ಉದ್ಯೋತ ನೇಮಕಾತಿಗೆ ತಡೆ ಹಾಕಿರುವುದರಿಂದ ಬಹಳಷ್ಟು ನಿರುದ್ಯೋಗಿಗಳು ವಯಸ್ಸಿನ ಮೀತಿ ಮೀರುವ ಆತಂಕಕ್ಕೆ ಸಿಲುಕಿದ್ದು, ಆದ್ದ–ರಿಂದ ಸರ್ಕಾರ ವಯೋಮಿತಿಯನ್ನು ಒಂದು ವರ್ಷ ಸಡಿಲಗೊಳಿಸಬೇಕು ಎಂದು ಆಗ್ರಹಿಸಿದರು.

ಸಿದ್ದರಾಮಯ್ಯ ಅವರನ್ನು ಅಂಬೇಡ್ಕರ್‌ಗೆ ಹೋಲಿಸುವ ಮೂಲಕ ಸಿಎಂ ಓಲೈಕೆ ನಡೆಸುತ್ತಿದ್ದೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಆಂಜನೇಯ, ಈ ವಿಷಯದಲ್ಲಿ ಯಾ–ರೇ ಎಷ್ಟೇ ಟೀಕೆ ಮಾಡಲಿ, ಡೋಂಟ್‌ಕೇರ್. ನನ್ನ ಮಾತಿಗೆ ಈಗಲೂ ಬದ್ಧ ಎಂದರು.

ನಾಡಿನಲ್ಲಿ ಬಹಳಷ್ಟು ಮಠಾಧೀಶರನ್ನು ಆಧುನೀಕ ಬಸವಣ್ಣ, ನಡೆದಾಡುವ ದೇವರು ಎಂದು ಬಣ್ಣಿಸಿದ್ದೇವೆ. ಕಾರಣ ಅವರ ನಿಸ್ವಾರ್ಥ ಸೇವೆ. ಜನರಿಗೆ ಮಾಡಿದ ಒಳ್ಳೆಯ ಕೆಲಸಕ್ಕೆ ಕೃತಜ್ಞತೆ ಸಲ್ಲಿಸುವ ಮಾದರಿಯಾಗಿದೆ. ಅದೇ ರೀತಿ ದಲಿತ ಸಮುದಾಯಕ್ಕೆ ಸಿದ್ದರಾಮಯ್ಯ ಮಾಡಿದಷ್ಟು ಅನುಕೂಲ ದೇಶದಲ್ಲಿ ಯಾವುದೇ ರಾಜಕಾರಣಿ ಮಾಡಿಲ್ಲ. ಎಸ್ಸಿಎಸ್ಪಿ, ಟಿಎಸ್ಪಿ ಕಾಯ್ದೆ, ಜನಸಂಖ್ಯೆ ಆಧರಿತ ಆರ್ಥಿಕ ಮೀಸಲು, ಗುತ್ತಿಗೆಯಲ್ಲಿ ಮೀಸಲಾತಿ ಹೀಗೆ ಹತ್ತಾರು ಕಾರ್ಯಕ್ರಮಗಳನ್ನು ಕೊಟ್ಟಿದ್ದಾರೆ. ಆದ್ದ–ರಿಂದ ಅವರು ನಮ್ಮ ಪಾಲಿಗೆ ಅಂಬೇಡ್ಕರ್ ಆಗಿದ್ದಾರೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಪಂ ಮಾಜಿ ಸದಸ್ಯರಾದ ಬಿ.ಪಿ.ಪ್ರಕಾಶಮೂರ್ತಿ, ನರಸಿಂಹರಾಜು, ಲಿಡ್ಕರ್ ಮಾಜಿ ಅಧ್ಯಕ್ಷ ಓ.ಶಂಕರ್, ಮುಖಂಡರಾದ ರವೀಂದ್ರ, ಶರಣಪ್ಪ, ದೇವರಾಜ್, ತಮಕಟ್ಟೆ ಹನುಮಂತಪ್ಪ, ಐನಹಳ್ಳಿ ಗ್ರಾಪಂ ಅಧ್ಯಕ್ಷ ಆರ್.ಉಮೇಶ್ ಇತರರಿದ್ದರು.

ನ್ಯಾಯಾಲಯ ಸಮಯಕ್ಕೆ ಆದ್ಯತೆ ನೀಡಿ: ನ್ಯಾ. ವೇಲಾ

ದಾವಣಗೆರೆ: ಕಕ್ಷಿದಾರರಿಗೆ ನ್ಯಾಯ ಕಲ್ಪಿಸುವ ನಿಟ್ಟಿನಲ್ಲಿ ನ್ಯಾಯಾಲಯದ ಸಮಯ ಅತಿಮುಖ್ಯವಾಗಿದ್ದು, ಸಮಯ ಪಾಲನೆಯನ್ನು ನಿರ್ವಹಿಸಿ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ. ವೇಲಾ ಕಿವಿಮಾತು ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಗಳ ಸಂಕೀರ್ಣದಲ್ಲಿರುವ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ದಾವಣಗೆರೆ ಜಿಲ್ಲಾ ನ್ಯಾಯಾಲಯಕ್ಕೆ ವರ್ಗಾವಣೆ ಆಗಿ ಆಗಮಿಸಿರುವ ನ್ಯಾಯಾಧೀಶರುಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಇಲ್ಲಿರುವ ನ್ಯಾಯಾಧೀಶರು ಕಠಿಣ ಶ್ರಮ, ಸಹಕರಿಸುವ ಗುಣ ಹೊಂದಿರುವವರು ಹಾಗೂ ಮೆದು ಸ್ವಭಾವದವರೆಂದು ತಿಳಿದು ಬಂದಿದೆ. ಅದೇ ರೀತಿ ಕೋರ್ಟ್ ಟೈಮಿಂಗ್ಸ್ ಕೂಡ ಮುಖ್ಯವಾಗಿದ್ದು, ಅದರೆಡೆಗೂ ನ್ಯಾಯವಾದಿಗಳು, ಎಲ್ಲರೂ ಗಮನಹರಿಸಬೇಕು ಎಂದು ಹೇಳಿದರು.

ಇಲ್ಲಿರುವವರೆಲ್ಲರೂ ಕಾನೂನುಗಳು ಬಗ್ಗೆ ತಿಳಿದಿದ್ದಾರೆ ನಿಜ. ಆದರೆ ಎಲ್ಲವೂ ಗೊತ್ತಿದೆ ಎನ್ನಲು ಸಾಧ್ಯವಿಲ್ಲ. ಪ್ರತಿದಿನವೂ ಕಲಿಕೆ ಇದ್ದೇ ಇರುತ್ತದೆ. ನಿಮ್ಮ ಸಹಕಾರವೂ ಮುಖ್ಯ, ಅದೇ ರೀತಿ ನಮ್ಮ ಸಹಕಾರವೂ ಇರುತ್ತದೆ ಎಂದು ವೇಲಾ ಹೇಳಿದರು.

ಯಾವುದೇ ನ್ಯಾಯವಾದಿಗಳಾಗಲಿ ಅವರಿಗೆ ತಕ್ಕಂತೆ ಅಪೇಕ್ಷೆಗಳು ಇದ್ದೇ ಇರುತ್ತವೆ. ಜಾಮೀನು ಅಥವಾ ಮಧ್ಯಂತರ ಅರ್ಜಿಗಳ ಕುರಿತಂತೆ ಯಾವುದೇ ಗೊಂದಲ ಬೇಡ. ಸರಿಯಾದ ದಾಖಲೆಗಳೊಂದಿಗೆ ನ್ಯಾಯಾಲಯಕ್ಕೆ ಹಾಜರಾಗಿ ಕಕ್ಷಿದಾರರಿಗೆ ನ್ಯಾಯ ಕೊಡಿಸಿ ಎಂದು ಸಲಹೆ ನೀಡಿದರು.

ನ್ಯಾಯಾಧೀಶರಾದ ಆರ್.ಎನ್. ಪ್ರವೀಣ್ ಕುಮಾರ್ ಮಾತನಾಡಿ, ವಾದವನ್ನು ತಾರ್ಕಿಯಿಂದ ಆಲಿಸಿ. ಅದು ನಿಮ್ಮ ಮುಂದಿನ ಭವಿಷ್ಯಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು. ನ್ಯಾ. ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಮಾತನಾಡಿ, ಒಬ್ಬ ನ್ಯಾಯಾಧೀಶರಾದವರು ಯಾವುದೇ ನಿಷ್ಪಕ್ಷಪಾತ ನ್ಯಾಯ ನೀಡಿದರೆ ನ್ಯಾಯಾಲಕ್ಕೆ ಗೌರವ ಸಲ್ಲಿಸಿದಂತೆ ಎಂದು ಹಿರಿಯ ನ್ಯಾಯವಾದಿಗಳಾದ ಶಿವರಾಜ್ ಪಾಟೀಲ್ ತಮ್ಮ ' ಶಿವನುಡಿ' ಯಲ್ಲಿ ಹೇಳಿದ್ದಾರೆ. ಆತ್ಮಸಾಕ್ಷಿಯನ್ನು ಅನುಸರಿಸಿ ಎಂದು ಕಿವಿಮಾತು ಹೇಳಿದರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಎಚ್. ಅರುಣ್ ಕುಮಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ, ದಾವಣಗೆರೆ ಜಿಲ್ಲಾ ಸಂಘಕ್ಕೆ 75 ವರ್ಷಗಳ ಇತಿಹಾಸವಿದೆ. ದಾವಣಗೆರೆ ವಕೀಲರ ಸಂಘದ ಎಸ್. ಸಿದ್ಧವೀರಪ್ಪನವರು ಸಂವಿಧಾನ ಸಂಸ್ಥಾಪನಾ ಸದಸ್ಯರಾಗಿದ್ದರು ಎನ್ನುವುದು ಹೆಮ್ಮೆಯ ವಿಷಯ. ಅನೇಕರು ಸಚಿವರು, ಶಾಸಕರು, ಮಂತ್ರಿಗಳಾಗಿ ಕೆಲಸ ಮಾಡಿದ್ದಾರೆ ಎಂದು ಸ್ಮರಿಸಿದರು.

ಸಂಘದಲ್ಲಿ 1400 ಸದಸ್ಯರಿದ್ದು, ಸಮರ್ಪಕವಾಗಿ ನ್ಯಾಯ ನೀಡುವ ಕೆಲಸ ಮಾಡುತ್ತಿದ್ದಾರೆ. ನೂತನ ನ್ಯಾಯಾಧೀಶರುಗಳು ಯಾವುದೇ ಸಂಕೋಚವಿಲ್ಲದೆ ಕಾರ್ಯ ನಿರ್ವಹಿಸಬಹುದು. ಮಧ್ಯಂತರ ಆದೇಶ ಹಾಗೂ ಜಾಮೀನು ವಿಚಾರದಲ್ಲಿ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂಬ ಆಶಯ ಎಲ್ಲರದ್ದು. ನಿಮ್ಮ ಎಲ್ಲ ಸಮರ್ಪಕ ನ್ಯಾಯವಿತರಣೆ ಸಂದರ್ಭದಲ್ಲಿ ನಮ್ಮ ಸಹಕಾರವಿರುತ್ತದೆ ಎಂದು ತಿಳಿಸಿದರು.

ವೇದಿಕೆಯ ಮುಖ್ಯ ಅತಿಥಿಗಳಾಗಿ ನ್ಯಾಯಾಧೀಶರುಗಳಾದ ಶ್ರೀರಾಮ ನಾರಾಯಣ ಹೆಗಡೆ, ಶಿವಪ್ಪ ಗಂಗಪ್ಪ ಸಲಗರೆ, ಮಹಾವೀರ ಮ. ಕರೆಣ್ಣವರ, ಹೆಚ್.ಡಿ. ಗಾಯತ್ರಿ ಆಗಮಿಸಿದ್ದರು.

ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು ಆದ ಹೆಚ್.ಕೆ. ರೇಷ್ಮಾ, ಒಂದನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ವಿ.ಎಲ್. ಅಮರ್, ಎರಡನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಸಿ. ನಾಗೇಶ್, ಮೂರನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್ ಸಿ ಕೆ. ಲತಾ, ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎ

ಇಂದಿನ ರಾಶಿ ಭವಿಷ್ಯ

ಮೇಷ ರಾಶಿ

ನಿಯಮಿತ ತೊಂದರೆ ನಿಮಗೆ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು. ನಿಮ್ಮ ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ.

ವೃಷಭ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಸ್ವಾನುಕಂಪದಲ್ಲಿ ಸಮಯ ವ್ಯರ್ಥ ಮಾಡದೇ ಜೀವನದ ಪಾಠಗಳನ್ನು ಕಲಿಯಲು ಪ್ರಯತ್ನಿಸಿ.

ಮಿಥುನ ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಒಂದು ಮಂಕು ಕವಿದ ಮತ್ತು ನಿಧಾನ ದಿನದಲ್ಲಿ ಸ್ನೇಹಿತರು ಮತ್ತು ಸಂಗಾತಿ ನಿಮಗೆ ಆರಾಮ ಮತ್ತು ಸಂತೋಷ ತರುತ್ತಾರೆ.

ಕರ್ಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ ಆದರೆ ನಿಮ್ಮ ಬುದ್ಧಿವಂತಿಕೆಯಿಂದ ಈ ಹಾನಿಯನ್ನು ಲಾಭದಲ್ಲಿ ಪರಿವರ್ತಿಸಬಹುದು ನೀವು ನಂಬಿ ಅಥವಾ ಬಿಡಿ ನಿಮ್ಮ ಬಳಿಯಿರುವ ಯಾರಾದರೂ ನಿಮ್ಮನ್ನು ಅತ್ಯಂತ ನಿಕಟವಾಗಿ ಗಮನಿಸುತ್ತಿದ್ದಾರೆ ಮತ್ತು ನಮ್ಮನ್ನು ಅವರ ಆದರ್ಶವೆಂದು ಪರಿಗಣಿಸುತ್ತಾರೆ – ಇದು ನಿಮ್ಮ ಖ್ಯಾತಿಯನ್ನು ಹೆಚ್ಚಿಸುತ್ತದೆ.

ಸಿಂಹ ರಾಶಿ

ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ. ಸಹಯೋಗದಲ್ಲಿ ಹೊಸ ಉದ್ಯಮ ಆರಂಭಿಸಲು ಒಳ್ಳೆಯ ದಿನ.

ಕನ್ಯಾ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು ಮತ್ತು ಭೂಮಿಯನ್ನು ಮಾರಾಟ ಮಾಡುವ ಮೂಲಕ ಅವರು ಉತ್ತಮ ಹಣವನ್ನು ಪಡೆಯಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

ತುಲಾ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಅಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ.

ವೃಶ್ಚಿಕ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರೊಡನೆ ನಿಮ್ಮ ವೈಯಕ್ತಿಕ ಭಾವನೆಗಳು / ರಹಸ್ಯಗಳನ್ನು ಹಂಚಿಕೊಳ್ಳಲು ಇದು ಸರಿಯಾದ ಸಮಯವಲ್ಲ.

ಧನು ರಾಶಿ

ಹೆಚ್ಚಿನ ಕ್ಯಾಲೋಜರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ತಪ್ಪದೆ ಮಾಡಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಬಾಕಿಯಿರುವ ಮನೆಯ ಕೆಲಸ ಮುಗಿಸಲು ನಿಮ್ಮ ಸಂಗಾತಿಯ ಜೊತೆ ಏರ್ಪಾಡುಗಳನ್ನು ಮಾಡಿ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ.

ಮಕರ ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ.

ಕುಂಭ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು.

ಮೀನ ರಾಶಿ

ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ, ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

ಹೇಮಾವತಿ ಲಿಂಕ್ ಕೆನಾಲ್ ಯೋಜನೆ: ಹೋರಾಟಗಾರರ ವಿರುದ್ಧದ FIR ಅತ್ಯಂತ ಖಂಡನೀಯ; BJP

ಬೆಂಗಳೂರು: ಹೇಮಾವತಿ ಲಿಂಕ್ ಕೆನಾಲ್ ಹೋರಾಟದ ಸಂಬಂಧ ತುಮಕೂರು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಸಮನ್ವಯತೆ ಸಾಧಿಸಿ ಜನರ ಬೇಡಿಕೆಗೆ ಸೂಕ್ತ ಪರಿಹಾರ ಕಂಡುಹಿಡಿಯುವ ಬದಲು ಹೋರಾಟಗಾರರ ಮೇಲೆ ಎಫ್ ಐ ಆರ್ ದಾಖಲಿಸಿ. ಹೋರಾಟವನ್ನು ಹತ್ತಿಕ್ಕುವ ಸರ್ಕಾರದ ಕ್ರಮ ಅತ್ಯಂತ ಖಂಡನೀಯ ಎಂದು ಬಿಜೆಪಿ ಸೋಮವಾರ ಕಿಡಿಕಾರಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಾಕ್ಷ ಬಿ.ವೈ. ವಿಜಯೇಂದ್ರ ಅವರು, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಹೇಮಾವತಿ ಲಿಂಕ್ ಕೆನಾಲ್ ಹೋರಾಟದ ಸಂಬಂಧ ತುಮಕೂರು ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಸಮನ್ವಯತೆ ಸಾಧಿಸಿ ಜನರ ಬೇಡಿಕೆಗೆ ಸೂಕ್ತ ಪರಿಹಾರ ಕಂಡುಹಿಡಿಯುವ ಬದಲು ಅವರ ಹೋರಾಟವನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಚಳವಳಿಯಲ್ಲಿ ಭಾಗವಹಿಸಿದ್ದ ತುಮಕೂರು ಜಿಲ್ಲೆಯ ವಿವಿಧ ಮಠಗಳ ಪರಮಪೂಜ್ಯ ಸ್ವಾಮೀಜಿಗಳು ಸೇರಿದಂತೆ ಶಾಸಕರು ಹಾಗೂ ರೈತ ಹೋರಾಟಗಾರರ ಮೇಲೆ ಎಫ್ ಐ ಆರ್ ದಾಖಲಿಸಿರುವ ಕ್ರಮ ಅತ್ಯಂತ ಖಂಡನೀಯ ಎಂದು ಹೇಳಿದ್ದಾರೆ.

ಕೃಷಿಕ ಸಮಸ್ಯೆ ಹಾಗೂ ರೈತರ ಹಲವಾರು ಬೇಡಿಕೆಗಳ ಕುರಿತು ಹೋರಾಡಬೇಕಿದ್ದ ನಮ್ಮ ಜನರನ್ನು ನಮ್ಮೊಳಗೇ ಹೋರಾಟ ಮಾಡುವ ವಿಷಮ ಪರಿಸ್ಥಿತಿಯನ್ನು ಸೃಷ್ಟಿಸುತ್ತಿರುವ ಕಾಂಗ್ರೆಸ್ ಸರ್ಕಾರ ಒಡೆದು ಆಳುವ ನೀತಿ ಅನುಸರಿಸುತ್ತಿದೆ, ರಾಜಕೀಯ ಪ್ರತಿಷ್ಠೆಗೆ ಈ ವಿವಾದ ಹುಟ್ಟು ಹಾಕುತ್ತಿದೆ ಎಂಬ ಭಾವನೆ ಹೇಮಾವತಿ ಲಿಂಕ್ ಕೆನಾಲ್

ವಿಚಾರದಲ್ಲಿ ಸೃಷ್ಟಿಯಾಗಿದೆ, ಇದಕ್ಕೆ ನೇರ ಹೊಣೆ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ. ಈ ಕೂಡಲೇ ಸರ್ವ ಪಕ್ಷಗಳ ಸಭೆ ಕರೆದು ಸಂಬಂಧಿಸಿದ ಜಿಲ್ಲೆಗಳ ಜನಪ್ರತಿನಿಧಿಗಳು, ಪ್ರಮುಖರು ಹಾಗೂ ರೈತ ಮುಖಂಡರೊಂದಿಗೆ ಚರ್ಚಿಸಿ ಜಿಲ್ಲೆಗಳ ಜನರಲ್ಲಿ ಸೋದರತ್ವದ ಭಾವನೆ ಹಾಗೂ ಸಾಮರಸ್ಯ ಗಟ್ಟಿಗೊಳಿಸಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯಲು ಸರ್ಕಾರ ಈ ಕೂಡಲೇ ಮುಂದಾಗಲಿ.ತುಮಕೂರು ಜಿಲ್ಲೆಯ ರೈತ ಸಮುದಾಯ, ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳ ಆಕ್ರೋಶ ಜನಕಾಳಜಿ ಹಾಗೂ ರೈತ ಕಾಳಜಿಯೇ ಹೊರತು ಯಾರ ವಿರುದ್ಧವೂ ಅಲ್ಲ ಎಂಬ ಸ್ಪಷ್ಟತೆ ಸರ್ಕಾರಕ್ಕಿರಲಿ, ಸದ್ಯ ಅವಶ್ಯಕತೆ ಇರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಗೂ ನೀರಿನ ಸಮಸ್ಯೆ ನೀಗಿಸುವ ನಿಟ್ಟಿನಲ್ಲಿ ಸರ್ವ ಸಮ್ಮತ ಹಾಗೂ ನ್ಯಾಯೋಜಿತ ಪರಿಹಾರ ಕಂಡುಹಿಡಿಯಲಿ ಎಂದು ಆಗ್ರಹಿಸಿದ್ದಾರೆ.

ರಾಜ್ಯದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಮಾಡುತ್ತಿದೆ BJP-RSS: ಪ್ರಿಯಾಂಕ್ ಖರ್ಗೆ

ಬೆಂಗಳೂರು: ಬಿಜೆಪಿ ಮತ್ತು ಆರ್ಎಸ್ಎಸ್ ರಾಜ್ಯದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಮಾಡುತ್ತಿದೆ. ಕೋಮುದ್ವೇಷವನ್ನು ಹರಡುತ್ತಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆಯವರು ಶನಿವಾರ ವಾಗ್ದಾಳಿ ನಡೆಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿಜೆಪಿ ಹಾಗೂ ಆರ್ಎಸ್ಎಸ್ ನಾಯಕರ ಷಡ್ಯಂತ್ರಕ್ಕೆ ಪ್ರತಿಯಾಗಿ ಕಲಬುರಗಿಯ ಪ್ರಜ್ಞಾವಂತ ನಾಗರೀಕರು ನನ್ನನ್ನು ಬೆಂಬಲಿಸುವ ಮೂಲಕ ತಕ್ಕ ಉತ್ತರ ನೀಡಿದ್ದಾರೆಂದೂ ಹೇಳಿದ್ದಾರೆ.

ರಾಜಕೀಯವಾಗಿ ಸೈದ್ಧಾಂತಿಕವಾಗಿ, ವೈಚಾರಿಕವಾಗಿ ನನ್ನನ್ನು ಎದುರಿಸಲು ಸಾಧ್ಯವಾಗದ ಬಿಜೆಪಿಯವರು ವೈಯಕ್ತಿಕ ದಾಳಿಗಳ ಮೂಲಕ ನನ್ನ ತೇಜೋವಧೆಗೆ ಪ್ರಯತ್ನಿಸಿದರು. ಇದನ್ನು ಕಂಡು ಸಹಿಸದೇ ಪ್ರಜ್ಞಾವಂತ ನಾಗರೀಕರಾದ ನೀವು ಸಿಡಿದೆದ್ದಿದ್ದೀರಿ ಎಂದು ಧನ್ಯವಾದ ಹೇಳಿದ್ದಾರೆ.

ವಚನ ಚಳವಳಿಯ ಮೂಲಕ ನಾಡಿಗೆ ವಿಚಾರ ಕ್ರಾಂತಿಯನ್ನು ಪರಿಚಯಿಸಿದ ಕಲ್ಯಾಣ ಕರ್ನಾಟಕವು ಅಂದಿನಿಂದ ಇಂದಿನವರೆಗೂ ವೈಚಾರಿಕ ಪ್ರಜ್ಞೆಯಲ್ಲಿ ಸದಾ ಮುಂದಿದ್ದಾರೆ.

ಇಂತಹ ಕಲ್ಯಾಣ ಶರಣರ ನಾಡು ಎಂದಿಗೂ ಆರ್ಎಸ್ಎಸ್ ಬಿಜೆಪಿಯವರ ಮಲಿನ ಚಿಂತನೆಗಳಿಗೆ ಅವಕಾಶ ಕೊಡುವುದಿಲ್ಲ. ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಶಕ್ತಿಯನ್ನು ನಂಬಿರುವ ಕಲಬುರಗಿಯ ಜನರು ಇಂದು ನನ್ನ ಪರವಾಗಿ ಬೃಹತ್ ಮಟ್ಟದ ವೈಚಾರಿಕ ಬೆಂಬಲವನ್ನು ದಾಖಲಿಸಿದ್ದು ನನ್ನ ಋಣಭಾರವನ್ನು ಇನ್ನಷ್ಟು ಹೆಚ್ಚಿಸಿದೆ.ಇಂತಹ ಕಲ್ಯಾಣ ಶರಣರ ನಾಡು ಎಂದಿಗೂ ಆರ್ಎಸ್ಎಸ್

ಬಿಜೆಪಿಯವರ ಮಲಿನ ಚಿಂತನೆಗಳಿಗೆ ಅವಕಾಶ ಕೊಡುವುದಿಲ್ಲ. ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಶಕ್ತಿಯನ್ನು ನಂಬಿರುವ ಕಲಬುರಗಿಯ ಜನರು ಇಂದು ನನ್ನ ಪರವಾಗಿ ಬೃಹತ್ ಮಟ್ಟದ ವೈಚಾರಿಕ ಬೆಂಬಲವನ್ನು ದಾಖಲಿಸಿದ್ದು ನನ್ನ ಋಣಭಾರವನ್ನು ಇನ್ನಷ್ಟು ಹೆಚ್ಚಿಸಿದೆ.

ಕಲಬುರಗಿಯ ಪ್ರಬುದ್ಧ ಜನರೇ, ಸತ್ಯದ ಹಾದಿಯಲ್ಲಿ ನಡೆಯುವವರಿಗೆ, ಜನಹಿತಕ್ಕಾಗಿ ಬದುಕುವವರಿಗೆ ಎಂದಿಗೂ ಬೆಂಬಲ ಇದ್ದೇ ಇರುತ್ತದೆ ಎಂಬುದನ್ನು ನೀವು ಮತ್ತೊಮ್ಮೆ ಸಾಬೀತುಪಡಿಸಿದ್ದೀರಿ. ನನ್ನನ್ನು ಕೇವಲ ರಾಜಕಾರಣಿಯನ್ನಾಗಿ ನೋಡದೆ, ನಿಮ್ಮಲ್ಲಿ ಒಬ್ಬ ಎಂದು ಪರಿಗಣಿಸಿ ತೋರಿಸುತ್ತಿರುವ ಪ್ರೀತಿ, ಕಾಳಜಿ ನನ್ನನ್ನು ಮೂಕವಿಸ್ಮಿತನನ್ನಾಗಿಸಿದೆ.

ದೇಶಕ್ಕಾಗಿ ರಾಜೀವ್ ಪ್ರಾಣ ಬಿಟ್ಟರು: ಸೋನಿಯಾರಿಂದ 2 ಬಾರಿ PM ಹುದ್ದೆ ತ್ಯಾಗ; ಕಾಂಗ್ರೆಸ್ ಪಕ್ಷಕ್ಕಿದೆ ದೊಡ್ಡ ಇತಿಹಾಸ–DKS

ಬೆಂಗಳೂರು: ಬೆಂಗಳೂರಿನ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರಗಳ ಕೊಡುಗೆಯೇ ಹೆಚ್ಚು. ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ 1 ಲಕ್ಷ ಕೋಟಿ ಮೊತ್ತದ ದೊಡ್ಡ ಯೋಜನೆಗಳನ್ನು ಹಮ್ಮಿಕೊಂಡಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು. ಕಳೆದ 20

ವರ್ಷಗಳಲ್ಲಿ ಬೆಂಗಳೂರು ಜನತೆ 70 ಲಕ್ಷದಿಂದ 1.50 ಕೋಟಿಗೆ ಏರಿಕೆಯಾಗಿದೆ. ಹೀಗಾಗಿ ಬೆಂಗಳೂರಿನ ಅಭಿವೃದ್ಧಿಗೆ ಮುಂದಿನ ಮೂರ್ನಾಲ್ಕು ವರ್ಷಗಳಲ್ಲಿ 1 ಲಕ್ಷ ಕೋಟಿ ಮೊತ್ತದ ಯೋಜನೆ ರೂಪಿಸಿದ್ದೇವೆ.

ನಿಮ್ಮ ಕ್ಷೇತ್ರದಲ್ಲಿ ಹಾದು ಹೋಗುವ ನೆಲಮಂಗಲ ಮೇಲ್ಸೇತುವೆ ಬಿಜೆಪಿಯವರು ಮಾಡಿದ್ದಲ್ಲ, ಕೃಷ್ಣ ಭೈರೇಗೌಡ ಅವರ ಕ್ಷೇತ್ರದಲ್ಲಿ ವಿಮಾನ ನಿಲ್ದಾಣಕ್ಕೆ ಹೋಗುವ ಮೇಲ್ಸೇತುವೆ, ಹೊಸೂರು ರಸ್ತೆಯಲ್ಲಿರುವ ಮೇಲ್ಸೇತುವೆ, ಕೋಲಾರಕ್ಕೆ ಡಬಲ್ ರೋಡ್ ಮಾಡಿದ್ದು ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲಿ. ಬೆಂಗಳೂರಿನಲ್ಲಿ ಇಂತಹ ಯಾವುದೇ ಕಾರ್ಯಕ್ರಮವಿದ್ದರೂ ಅದು

ಕಾಂಗ್ರೆಸ್ ಸರ್ಕಾರದ ಕೊಡುಗೆಯೇ ವಿನಃ ಬಿಜೆಪಿ ಸರ್ಕಾರವಲ್ಲ" ಎಂದು ತಿಳಿಸಿದರು.

"ಬೆಂಗಳೂರು ಬೆಳೆಯುತ್ತಿದೆ. ಹೀಗಾಗಿ ನಾವು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ ಮಾಡಿದ್ದೇವೆ. ಇದರಲ್ಲಿ ಎಷ್ಟು ಪಾಲಿಕೆ ಮಾಡಬೇಕು

ಎಂದು ಚರ್ಚೆ ಮಾಡಲು ಸಚಿವರು ಹಾಗೂ ಶಾಸಕರ ಸಭೆ ಮಾಡಿದ್ದೇನೆ.

ಇನ್ನೊಂದು ವಾರದಲ್ಲಿ ಮತ್ತೊಂದು ಸಭೆ ಮಾಡಿ ಅಂತಿಮ ತೀರ್ಮಾನ ಮಾಡಲಾಗುವುದು. ಪಾಲಿಕೆ ರಚಿಸಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯನ್ನು ಮಾಡುತ್ತೇವೆ. ಹೊಸ ಪಾಲಿಕೆ ಸದಸ್ಯರು ಆಯ್ಕೆಯಾಗಬೇಕು.

ಮುಂದೆ ದಾಸರಹಳ್ಳಿಯಲ್ಲಿ ಶಾಸಕ ಹಾಗೂ ಕಾರ್ಪೊರೇಟರ್ ಸ್ಥಾನಗಳು ಕಾಂಗ್ರೆಸ್ ಪಕ್ಷಕ್ಕೆ ಎಂಬ ನಂಬಿಕೆ ಇದೆ" ಎಂದು ತಿಳಿಸಿದರು. "ರಾಜ್ಯದಲ್ಲಿ ಉದ್ಯೋಗ ಸೃಷ್ಟಿಸಲು ಇತ್ತೀಚೆಗೆ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ಮಾಡಿದೆವು. ಅದರಲ್ಲಿ 10 ಲಕ್ಷ ಕೋಟಿ ಬಂಡವಾಳ ಹೂಡಿಕೆ ಒಪ್ಪಂದವಾಗಿವೆ" ಎಂದರು.

ಕಳೆದ ವಿಧಾನಸಭೆ ಚುನಾವಣೆಗೂ ಮುನ್ನ ಮಾಜಿ ಶಾಸಕ ಮಂಜುನಾಥ್ ಗೆ ಎಲ್ಲಾ ರೀತಿ ಹೇಳಿದೆ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ, ಅಧಿಕಾರದಲ್ಲಿದ್ದರೆ ಚೆಂದ ಎಂದು ಹೇಳಿದ್ದೆ. ಮಂಜಣ್ಣ ನನ್ನ ಮಾತು ಕೇಳಿದ್ದರೆ, ನನ್ನ ಹಾಗೂ ಕೃಷ್ಣ ಭೈರೇಗೌಡ ಅವರ ಮಧ್ಯೆ ವಿಧಾನಸೌಧದಲ್ಲಿ

ಕೂರುತ್ತಿದ್ದರು. ಮಂಜಣ್ಣ ಇಲ್ಲಿ ಶಾಸಕರಾಗಿ ಗೆದ್ದಿದ್ದು, ತ

ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ; 28 ವರ್ಷದ ನೃತ್ಯ ಶಿಕ್ಷಕನ ಬಂಧನ

ಬೆಂಗಳೂರು: ಬೆಂಗಳೂರಿನಲ್ಲಿ ತನ್ನ ಕಾರಿನಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ 28 ವರ್ಷದ ನೃತ್ಯ ಶಿಕ್ಷಕನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ಮೇ 24 ರಂದು ಕಾಡುಗೋಡಿ ಪ್ರದೇಶದಲ್ಲಿ ಈ ಘಟನೆ ನಡೆದಿತ್ತು. ಭಾರತಿ ಕಣ್ಣನ್ ಬಂಧಿತ ಆರೋಪಿ. ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಸಂತ್ರಸ್ತೆಯ ಬಳಿ ಕಾರು ನಿಲ್ಲಿಸಿದ್ದಾನೆ, ನಂತರ ತಾನು ನೃತ್ಯ ಶಿಕ್ಷಕ ಎಂದು ಪರಿಚಯಿಸಿಕೊಂಡು ನೃತ್ಯ ತರಗತಿಗಳ ಬಗ್ಗೆ ವಿವರಗಳನ್ನು ವಿವರಿಸುವ ನೆಪದಲ್ಲಿ ಆಕೆಯನ್ನು ಕಾರಿಗೆ ಹತ್ತಿಸಿಕೊಂಡಿದ್ದಾನೆ.

ಸಂತ್ರಸ್ತೆ ಕಾರು ಹತ್ತುತ್ತಿದ್ದಂತೆ, ಆರೋಪಿ ಬಾಗಿಲುಗಳನ್ನು ಲಾಕ್ ಮಾಡಿ ಸ್ವಲ್ಪದೂರ ಹೋಗಿದ್ದಾನೆ. ಈ ಸಮಯದಲ್ಲಿ, ಅವನು ಹುಡುಗಿಯ ಜೊತೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸ್ವಲ್ಪ ಸಮಯದ ನಂತರ ಕಣ್ಣನ್, ಸಂತ್ರಸ್ತೆಯನ್ನು ತಾನು ಕರೆದುಕೊಂಡು ಹೋದ ಸ್ಥಳದಲ್ಲೇ ಇಳಿಸಿದ್ದಾನೆ. ಸಂತ್ರಸ್ತೆ ಮನೆಗೆ ತಲುಪಿದ ನಂತರ, ಘಟನೆಯ ಬಗ್ಗೆ ತನ್ನ ಪೋಷಕರಿಗೆ ತಿಳಿಸಿದ್ದಾಳೆ. ಅದಾದ ಮೇಲೆ ಅವರು ದೂರು ದಾಖಲಿಸಿದ್ದರು, ನಂತರ, ಕಣ್ಣನ್ ನನ್ನು ಬಂಧಿಸಲಾಯಿತು ಎಂದು ವಿವರಿಸಿದ್ದಾರೆ.

ಡೊನಾಲ್ಡ್ ಟ್ರಂಪ್‌ಗೆ ಭಾರೀ ಮುಖಭಂಗ; ತೆರಿಗೆ ಯುದ್ಧಕ್ಕೆ ಬ್ರೇಕ್ ಹಾಕಿದ ಕೋರ್ಟ್

ವಾಷಿಂಗ್ಟನ್: ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ದೇಶದಲ್ಲಿ ಸಾಕಷ್ಟು ಬದಲಾವಣೆಯನ್ನು ತಂದಿದ್ದಾರೆ. ಟ್ರಂಪ್ ಪ್ರಾರಂಭಿಸಿದ್ದ ತೆರಿಗೆ ಯುದ್ಧಕ್ಕೆ ಕೋರ್ಟ್ ಈಗ ತಡೆ ಹಿಡಿದಿದೆ. ಅಮೆರಿಕದ ವ್ಯಾಪಾರ ಪಾಲುದಾರರಿಂದ ಆಮದುಗಳ ಮೇಲೆ ವ್ಯಾಪಕ ಸುಂಕ ವಿಧಿಸುವ ಮೂಲಕ ಅಧ್ಯಕ್ಷ ತಮ್ಮ ಅಧಿಕಾರವನ್ನು ಮೀರಿದ್ದಾರೆ ಎಂದು ಕೋರ್ಟ್ ಹೇಳಿದೆ. ಈ ಮೂಲಕ ಡೊನಾಲ್ಡ್ ಟ್ರಂಪ್ ಆಡಳಿತ ಜಾರಿಗೆ ತರಲು ಮುಂದಾಗಿದ್ದ ವ್ಯಾಪಕ ತೆರಿಗೆ ನೀತಿಗೆ ಬ್ರೇಕ್ ಹಾಕಿದೆ. ಈ ಮೂಲಕ ಟ್ರಂಪ್‌ಗೆ ಭಾರೀ ಹಿನ್ನಡೆಯಾಗಿದೆ.

ಅಮೆರಿಕದ ವಾಣಿಜ್ಯ ನ್ಯಾಯಾಲಯ ಟ್ರಂಪ್ ಓಟಕ್ಕೆ ಬ್ರೇಕ್ ಹಾಕಿದೆ. ಅಮೆರಿಕ ಕಾಂಗ್ರೆಸ್‌ಗೆ ಮಾತ್ರ ವಾಣಿಜ್ಯ ನೀತಿ ನಿಯಮ ರೂಪಿಸುವ ಅಧಿಕಾರವನ್ನು ಅಮೆರಿಕ ಸಂವಿಧಾನ ನೀಡಿದೆ ಎಂದು ಕೋರ್ಟ್ ಸರ್ಕಾರಕ್ಕೆ ತಿಳಿಸಿದೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಮೂಲದ ಭಯೋತ್ವಾದಕರು ನಡೆಸಿದ ಭಯೋತ್ವಾದಕ ದಾಳಿಯ ನಂತರ ಭಾರತ ಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಏರ್ಪಟ್ಟಿತ್ತು. ಆಗ ಕದನ ವಿರಾಮ ಏರ್ಪಡಿಸಲು ಟ್ರಂಪ್ ಉಭಯ ದೇಶಗಳಿಗೆ ವ್ಯಾಪಾರ ನಿರ್ಬಂಧದ ಬೆದರಿಕೆಯನ್ನು ಹಾಕಿದ್ದರು. ಅದರ ಕುರಿತೂ ಕೂಡ ನ್ಯಾಯಾಲಯ ಉಲ್ಲೇಖ ಮಾಡಿದೆ.

ಎಲ್ಲಾ ವಾದಗಳನ್ನು ತಿರಸ್ಕರಿಸಿದ ಮ್ಯಾನ್‌ಹ್ಯಾಟನ್ ಮೂಲದ ಮೂವರು ನ್ಯಾಯಾಧೀಶರ ಅಂತಾರಾಷ್ಟ್ರೀಯ ವಾಣಿಜ್ಯ ನ್ಯಾಯಾಲಯ ಐಇಇಪಿಎ ಆಡಿಯಲ್ಲಿ ಕಾಂಗ್ರೆಸ್ ಅಧ್ಯಕ್ಷರಿಗೆ "ಅಪರಿಮಿತ" ಅಧಿಕಾರಗಳನ್ನು ನಿಯೋಜಿಸಿಲ್ಲ ಎಂದು ತೀರ್ಪು ನೀಡಿತು. "ಅಸಾಮಾನ್ಯ ಮತ್ತು ಅಸಾಧಾರಣ ಬೆದರಿಕೆಯನ್ನು ಎದುರಿಸಲು" ತುರ್ತು ಪರಿಸ್ಥಿತಿಯ ಸಮಯದಲ್ಲಿ ಅಗತ್ಯ ಆರ್ಥಿಕ ನಿರ್ಬಂಧಗಳನ್ನು ವಿಧಿಸಲು ಮಾತ್ರ ಅಧ್ಯಕ್ಷರಿಗೆ ಅಧಿಕಾರ ನೀಡುತ್ತದೆ ಎಂದು ಪೀಠ ಹೇಳಿದೆ. ಅಮೆರಿಕದ ಆರ್ಥಿಕತೆಯನ್ನು ರಕ್ಷಿಸಲು, ಅಮೆರಿಕದ ಸಂವಿಧಾನವು ಕಾಂಗ್ರೆಸ್‌ಗೆ ವಿಶೇಷ ಅಧಿಕಾರವನ್ನು ನೀಡುತ್ತದೆ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ.

ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲು

ಬೆಂಗಳೂರು: ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದೆ ಎಂದು ಹಿರಿಯ ನಟ ಕಮಲ್ ಹಾಸನ್ ಅವರ ವಿವಾದಾತ್ಮಕ ಹೇಳಿಕೆ ಬಗ್ಗೆ ರಾಜ್ಯದಲ್ಲಿ ಆಕ್ರೋಶ ಭುಗಿಲೆದ್ದಿದೆ. ಕನ್ನಡದ ಬಗ್ಗೆ ಬಾಲಿಶ ಹೇಳಿಕೆ ನೀಡಿ ಕನ್ನಡಿಗರನ್ನು ಕೆಣಕಿದ ಕಮಲ್ ಹಾಸನ್ ವಿರುದ್ಧ ಕೇಸ್ ದಾಖಲಿಸಲಾಗಿದೆ. ನಟ ಕಮಲ್ ಹಾಸನ್ ಬೆಂಗಳೂರಿನ ಆರ್.ಟಿ. ನಗರ ಪೊಲೀಸ್ ಠಾಣೆಗೆ ಕರವೇ ಅಧ್ಯಕ್ಷ ಪ್ರವೀಣ್ ಶೆಟ್ಟಿ ಅವರು ದೂರು ಸಲ್ಲಿಕೆ ಮಾಡಿದ್ದಾರೆ. ಕನ್ನಡಿಗರ ಭಾವನೆಗೆ ನಟ ಕಮಲ್ ಹಾಸನ್ ಧಕ್ಕೆ ತಂದಿದ್ದಾರೆ. ಆತನ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದೂರು ಸಲ್ಲಿಸಿದ್ದಾರೆ.

ತಮ್ಮ 'ಥಗ್ ಲೈಫ್' ಚಿತ್ರದ ಪ್ರಚಾರದ ವೇಳೆ "ಕನ್ನಡ ತಮಿಳಿನಿಂದ ಹುಟ್ಟಿತು" ಎಂದು ಕಮಲ್ ಹಾಸನ್ ಹೇಳಿಕೆ ನೀಡಿರುವುದು ಕನ್ನಡಿಗರನ್ನು ಕೆರಳಿಸಿದೆ. ಕನ್ನಡದ ಹಿರಿಯ ನಟ ಶಿವರಾಜ್‌ಕುಮಾರ್ ಕೂಡ ಹಾಜರಿದ್ದ ಈ ಕಾರ್ಯಕ್ರಮದಲ್ಲಿ ಇದು ನನ್ನ ಕುಟುಂಬ. ಅದಕ್ಕಾಗಿಯೇ ಅವರು ಶಿವರಾಜಕುಮಾರ್ ಇಲ್ಲಿಗೆ ಬಂದಿದ್ದಾರೆ. ನಿಮ್ಮ ಭಾಷೆ (ಕನ್ನಡ) ತಮಿಳಿನಿಂದ ಹುಟ್ಟಿದೆ, ಆದ್ದರಿಂದ ನೀವು ಕೂಡ ಸೇರಿದ್ದೀರಿ" ಎಂದು ಹಾಸನ್ ಹೇಳಿದ್ದರು.

ಕನ್ನಡದ ನಟ ಶಿವರಾಜ್ ಕುಮಾರ್ ಉಪಸ್ಥಿತರಿದ್ದ ಕಾರ್ಯಕ್ರಮದಲ್ಲೇ ಕಮಲ್ ಹಾಸನ್ ಈ ಹೇಳಿದ್ದರು. ಹೀಗಿದ್ದರೂ ಶಿವಣ್ಣ ಏನೂ ಹೇಳದೇ ಸುಮ್ಮನೆ ಕುಳಿತಿದ್ದರು ಎಂಬುದು ಹಲವರ ಅಸಮಾಧಾನಕ್ಕೂ ಕಾರಣವಾಗಿತ್ತು. ಇದೀಗ ವಿವಾದಾತ್ಮಕ ಹೇಳಿಕೆ ನೀಡಿರುವ ನಟ ಕಮಲ್ ಹಾಸನ್ ಬಗ್ಗೆ ನಟ ಶಿವರಾಜ್ ಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ. ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವರಾಜ್ ಕುಮಾರ್ ಅವರು, ಕಮಲ್ ಹಾಸನ್ ಕೂಡ ಕನ್ನಡಕ್ಕೆ ಗೌರವ ಕೊಡುತ್ತಾರೆ. ನಿನ್ನೆ ಬಂದಾಗಲೂ ಅಷ್ಟೇ ಚೆನ್ನಾಗಿ ಮಾತನಾಡಿದ್ದಾರೆ. ನಾನು ಅವರ ಬಹಳ ದೊಡ್ಡ ಅಭಿಮಾನಿ. ನಮ್ಮನ್ನು ಗೌರವದಿಂದ ಸಮಾರಂಭಕ್ಕೆ ಕರೆದಿದ್ದರು.

ಬೆಂಗಳೂರು ನಿವಾಸಿಗಳ ಮೇಲೆ ಹೆಚ್ಚಿದ ತೆರಿಗೆ ಹೊರೆ:

ಸರ್ಕಾರದ ವಿರುದ್ಧ ಬಿಜೆಪಿ ಕಸದ ಸೆಸ್ ಜೊತೆಗೆ ಬಳಕೆದಾರರ ಶುಲ್ಕ ಕೈಬಿಡುವಂತೆ ಆಗ್ರಹ

ಬೆಂಗಳೂರು: ಬೆಂಗಳೂರಿನ ಜನತೆಯ ಮೇಲೆ ಪದೇ ಪದೇ ಬೆಲೆ ಏರಿಕೆಯ ಭಾರ ಹೊರಿಸಿ, ಸಾಮಾನ್ಯ ಜನರ ಬದುಕನ್ನು ರಾಜ್ಯ ಕಾಂಗ್ರೆಸ್ ಸರ್ಕಾರದ ಸಂಕಷ್ಟಕ್ಕೆ ತಳ್ಳುತ್ತಿದೆ ಎಂದು ಬಿಜೆಪಿ ಕಿಡಿಕಾರಿದ್ದು, ಕೂಡಲೇ ಕಸದ ಸೆಸ್ ಜೊತೆಗೆ ಬಳಕೆದಾರರ ಶುಲ್ಕ ವಿಧಿಸಿರುವ ನಿರ್ಧಾರವನ್ನು ಹಿಂಪಡೆಯಬೇಕೆಂದು ಬುಧವಾರ ಆಗ್ರಹಿಸಿದೆ.

ವಿಧಾನಮಂಡಲದ ಉಭಯ ಸದನಗಳ ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್ ಮತ್ತು ಛಲವಾದಿ ನಾರಾಯಣಸ್ವಾಮಿ ನೇತೃತ್ವದ ನಿಯೋಗವು ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್‌ಗಿರಿನಾಥ್ ಹಾಗೂ ಮುಖ್ಯ ಆಯುಕ್ತ ಎಂ.ಮಹೇಶ್ವರರಾವ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅಶೋಕ್ ಅವರು, ಬೆಂಗಳೂರಿನ ಜನರ ಮೇಲೆ ಕಾಂಗ್ರೆಸ್ ಸರ್ಕಾರ ಟನ್ನುಗಟ್ಟಲೆ ತೆರಿಗೆಯ ಭಾರವನ್ನು ಹೇರಿದೆ. ಈಗ ಕಸದಿಂದ ರಸ ತೆಗೆಯುವ ಸ್ಕೀಮ್ ಮಾಡಿದ್ದಾರೆ. ಇಡೀ ದೇಶದಲ್ಲಿ ಅತಿ ಹೆಚ್ಚು ಕಸದ ತೆರಿಗೆಯನ್ನು ಕಾಂಗ್ರೆಸ್ ವಿಧಿಸಿದೆ. ಕೆಂಪೇಗೌಡರು ನಾಡು ಕಟ್ಟಿದ ನಾಡಪ್ರಭು ಎಂಬ ಹೆಸರು ಪಡೆದಿದ್ದರೆ, ಕಾಂಗ್ರೆಸ್ ನಾಯಕರು ನಾಡನ್ನು ಹಾಳು ಮಾಡಿದವರು ಎಂಬ ಬಿರುದು ಪಡೆದಿದ್ದಾರೆ ಎಂದು ಟೀಕಿಸಿದರು.

ಈ ಮೊದಲು ನಗರದಲ್ಲಿ ಸೆಸ್ ಇತ್ತು. ಈಗ ಇದರ ಜೊತೆಗೆ ಬಳಕೆದಾರರ ಶುಲ್ಕ ವಿಧಿಸಿದ್ದಾರೆ. ಸೆಸ್‌ನಿಂದಲೇ ಸುಮಾರು 7250 ಕೋಟಿ ಸಂಗ್ರಹವಾಗುತ್ತಿದೆ. ಕಸದ ಟೆಂಡರ್‌ನ ಮೌಲ್ಯವೇ ರೂ.147 ಕೋಟಿ ಆಗಿದ್ದು, ಜನರಿಂದ ಅತ್ಯಧಿಕ ಶುಲ್ಕವಸೂಲಿ ಮಾಡುತ್ತಿದ್ದಾರೆ. ಇನ್ನು ಬಳಕೆದಾರರ ಶುಲ್ಕವೂ ಸೇರಿದರೆ ರೂ.500ರಿಂದ 600 ಕೋಟಿ ಸಂಗ್ರಹವಾಗುತ್ತದೆ ಎಂದರು.

ಎಲ್ ಇಟಿ ಸಂಘಟನೆಯ ಇಬ್ಬರು ಹೈಬ್ರಿಡ್ ಉಗ್ರರ ಬಂಧನ

ಶ್ರೀನಗರ : ಜಮ್ಮು ಮತ್ತು ಕಾಶ್ಮೀರದ ಶೋಪಿಯಾನ್ ಜಿಲ್ಲೆಯಲ್ಲಿ ಲಷ್ಕರ್–ಎ–ತೈಬಾ (ಎಲ್ಇಟಿ) ಉಗ್ರಗಾಮಿ ಸಂಘಟನೆಯ ಇಬ್ಬರು ಹೈಬ್ರಿಡ್ ಉಗ್ರಗಾಮಿಗಳನ್ನು ಭದ್ರತಾ ಪಡೆಗಳು ಬಂಧಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದು ಪ್ರಮುಖ ಕಾರ್ಯಾಚರಣೆಯ ಯಶಸ್ಸು ಎಂದು ಅಧಿಕಾರಿಗಳು ಹೇಳಿದ್ದಾರೆ. ಹೈಬ್ರಿಡ್ ಉಗ್ರಗಾಮಿಗಳು ಎಂದರೆ ಉಗ್ರ–ರೆಂದು ಪಟ್ಟಿ ಮಾಡಲಾಗಿಲ್ಲ ಆದರೆ ಭಯೋತ್ವಾದಕ ದಾಳಿ ನಡೆಸುವಷ್ಟು ಮೂಲಭೂತವಾದಿಗಳಾಗಿದ್ದಾರೆ ಮತ್ತು ನಂತರ ಸಾಮಾನ್ಯ ಜೀವನಕ್ಕೆ ಮರಳುತ್ತಾರೆ.

ಕಾರ್ಯಾಚರಣೆಯ ವಿವರಗಳನ್ನು ನೀಡುತ್ತಾ, ನಿರ್ದಿಷ್ಟ ಮಾಹಿತಿಯ ನಂತರ ಭದ್ರತಾ ಪಡೆಗಳು ಪೂಂಚ್‌ನ ಬಾಸ್ಕುಚನ್ ಪ್ರದೇಶದಲ್ಲಿ ರಾತ್ರಿ ಕಾರ್ಡನ್ ಮತ್ತು ಶೋಧ ಕಾರ್ಯಾಚರಣೆಯನ್ನು (ಸಿಎಎಸ್ಒ) ಪ್ರಾರಂಭಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಪ್ರದೇಶವನ್ನು ಪರಿಣಾಮಕಾರಿಯಾಗಿ ಸುತ್ತುವರಿಯಲಾಯಿತು ಮತ್ತು ಹತ್ತಿರದ ಹಣ್ಣಿನ ತೋಟದಲ್ಲಿ ಭಯೋತ್ವಾದಕರ ಚಲನವಲನವನ್ನು ಗಮನಿಸಲಾಯಿತು. ಪಡೆಗಳ ತ್ವರಿತ ಮತ್ತು ಕಾರ್ಯತಂತ್ರದ ಕ್ರಮವು ಇಬ್ಬರು ಎಲ್ ಇಟಿ ಹೈಬ್ರಿಡ್ ಭಯೋತ್ವಾದಕರ ಯಶಸ್ವಿ ಶರಣಾಗತಿಗೆ ಕಾರಣವಾಯಿತು, ಸಂಭಾವ್ಯ ಎನ್‌ಕೌಂಟರ್ ಅನ್ನು ತಪ್ಪಿಸಿತು ಎಂದು ಅವರು ಹೇಳಿದರು.

ಇಬ್ಬರನ್ನು ಇರ್ಫಾನ್ ಬಶೀರ್ ಮತ್ತು ಉಜೈರ್ ಸಲಾಮ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು.

ಅವರ ಬಳಿಯಿಂದ ಎರಡು ಎಕೆ–56 ರೈಫಲ್ ಗಳು, ನಾಲ್ಕು ಮ್ಯಾಗಜೀನ್‌ಗಳು, 102 ಗುಂಡುಗಳು, ಎರಡು ಹ್ಯಾಂಡ್ ಗ್ರೆನೇಡ್ ಗಳು, ಎರಡು ಪೌಚ್‌ಗಳು, 5,400 ರೂ. ನಗದು, ಒಂದು ಮೊಬೈಲ್ ಫೋನ್, ಒಂದು ಸ್ಮಾರ್ಟ್ ವಾಚ್ ಮತ್ತು ಆಧಾರ್ ಕಾರ್ಡ್ ಅನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣ ದಾಖಲಿಸಲಾಗಿದ್ದು, ತನಿಖೆ ಆರಂಭಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಹನಿಮೂನ್‌ಗೆ ತೆರಳಿದ್ದ ನವ ದಂಪತಿ ನಾಪತ್ತೆ

ಮೊಬೈಲ್ ಸ್ವಿಚ್ಡ್ ಆಫ್... ಸ್ಕೂಟರ್ ಪತ್ತೆ !

ಹನಿಮೂನ್‌ಗೆ ಹೋಗಿದ್ದ ನವ ದಂಪತಿ ನಿಗೂಢವಾಗಿ ನಾಪತ್ತೆಯಾಗಿರುವ ಘಟನೆ ಮೇಘಾಲಯದಲ್ಲಿ ವರದಿಯಾಗಿದೆ. ನಾಪತ್ತೆಯಾಗಿರುವ ದಂಪತಿಯನ್ನು ಉದ್ಯಮಿ ರಾಜ ರಘುವಂಶಿ ಮತ್ತು ಪತ್ನಿ ಸೋನಮ್ ಎಂದು ಗುರುತಿಸಲಾಗಿದೆ. ಶಿಲ್ಲಾಂಗ್‌ನ ಈಸ್ಟ್ ಕಾಶಿ ಹಿಲ್ಸ್‌ಗೆ ತೆರಳಿದ್ದ ಈ ಜೋಡಿ ಮೇ 23ರಿಂದ ಕಣ್ಮರೆಯಾಗಿದ್ದಾರೆ ಎನ್ನಲಾಗಿದೆ.

ಭೋಪಾಲ್: ಕೆಲವು ದಿನಗಳ ಹಿಂದೆಯಷ್ಟೇ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದ ಜೋಡಿಯೊಂದು(ಅಣಕಿಟಜಛ ಟ್ಚುಟಿರ) ಹನಿಮೂನ್‌ಗೆ ಹೋಗಿ ನಿಗೂಢವಾಗಿ ನಾಪತ್ತೆಯಾಗಿರುವ ಘಟನೆ ಮೇಘಾಲಯದಲ್ಲಿ ವರದಿಯಾಗಿದೆ. ನಾಪತ್ತೆಯಾಗಿರುವ ದಂಪತಿಯನ್ನು ಇಂದೋರ್ ಮೂಲದ ಉದ್ಯಮಿ ರಾಜ ರಘುವಂಶಿ ಮತ್ತು ಪತ್ನಿ ಸೋನಮ್ ಎಂದು ಗುರುತಿಸಲಾಗಿದೆ. ಶಿಲ್ಲಾಂಗ್‌ನ ಈಸ್ಟ್ ಕಾಶಿ ಹಿಲ್ಸ್‌ಗೆ ತೆರಳಿದ್ದ ಈ ಜೋಡಿ ಮೇ 23ರಿಂದ ಕಣ್ಮರೆಯಾಗಿದ್ದಾರೆ ಎನ್ನಲಾಗಿದೆ.

ಇವರಿಬ್ಬರು ಗುವಾಹಟಿ ಮೂಲಕ ಶಿಲ್ಲಾಂಗ್‌ಗೆ ಪ್ರಯಾಣಿಸಿ ಅಲ್ಲಿಂದ ಸುಮಾರು 60 ಕಿ.ಮೀ ದೂರವಿರುವ ಸೊಹ್ರಾ (ಚಿರಾಪುಂಜಿ) ಗೆ ಭೇಟಿ ನೀಡಲು ಸ್ಕೂಟರ್‌ವೊಂದನ್ನು ಬಾಡಿಗೆಗೆ ಪಡೆದಿದ್ದರು. ಮರುದಿನ, ಬಾಡಿಗೆಗೆ ಪಡೆದ ಆಕ್ಟಿವಾ ಸ್ಕೂಟರ್ ಮಾತ್ರ ಸಿಕ್ಕಿದೆ. ಆದರೆ ದಂಪತಿ ಮಾತ್ರ ಎಲ್ಲೂ ಪತ್ತೆಯಾಗಿಲ್ಲ. ಇನ್ನು ಈ ಜೋಡಿ ಮೇ 11ರಂದು ವೈವಾಹಿಕ ಬದುಕಿಗೆ ಕಾಲಿಟ್ಟಿದ್ದು, ಮೇ 20 ರಿಂದ ಹನಿಮೂನ್

ತೆರಳಿದ್ದರು. ಇವರು ಶಿಲ್ಲಾಂಗ್‌ಗೆ ಬರುವುದಕ್ಕೂ ಮುನ್ನ ಗುಹಾವಾಟಿಯ ಮಾ ಕಾಮಾಕ್ಯ ದೇವಾಲಯಕ್ಕೆ ಭೇಟಿ ನೀಡಿದ್ದರು ಎನ್ನಲಾಗಿದೆ.

ಇನ್ನು ಮಗ ಮತ್ತು ಸೊಸೆ ಕಾಣೆಯಾಗಿರುವ ವಿಚಾರ–ಕ್ಕೆ ಸಂಬಂಧಿಸಿದಂತೆ ರಾಜ ರಘುವಂಶಿ ತಾಯಿ ಮಾತಾನಾಡಿ ಇಬ್ಬರೂ ನಮ್ಮ ಜೊತೆ ಮೇ23 ರಂದು ಕೊನೆಯ ಬಾರಿ ಮಾತನಾಡಿದ್ದು, ಅವರ ಪ್ರವಾಸದ ಬಗ್ಗೆ ಸಂತಸ ಹಂಚಿಕೊಂಡಿದ್ದರು. ಅದಾದ ಬಳಿಕ ಇಬ್ಬರಿಗೂ ಫೋನ್ ಮಾಡುತ್ತಲೇ ಇದ್ದೆವು. ಆದರೆ ಯಾರೂ ಕರೆ ಸ್ವೀಕರಿಸಿಲ್ಲ. ಮೇ24 ರಿಂದ ಮೊಬೈಲ್ ಸ್ವಿಚ್ ಆಫ್ ಆಗಿದೆ. ಇನ್ನು ಅವರ ಸಹೋದರ ಸಚಿನ್ ರಘುವಂಶಿ ಮಾತನಾಡಿ ಪ್ರಾರಂಭದಲ್ಲಿ ನೆಟ್‌ವರ್ಕ್ ಸಮಸ್ಯೆ ಕೇಳಿ ಬಂತು ನಂತರ ಪದೇ ಪದೇ ಕರೆ ಮಾಡಿದೆವು ಆದರೆ ಸಂಪರ್ಕಿಸಲು ಸಾಧ್ಯವಾಗಿಲ್ಲ, ಕಾಣೆಯಾಗಿರುವ ಬಗ್ಗೆ ದೂರು ದಾಖಲಿಸಲಾಗಿದೆ. ಸ್ಥಳೀಯ ಪೋಲಿಸರ ಸಹಕಾರದ ಜೊತೆಗೆ ಹುಡುಕಾಟ ನಡೆಸುತ್ತಿದ್ದೇವೆ ಎಂದಿದ್ದಾರೆ.

ಘಟನೆ ಬಗ್ಗೆ ಸ್ಥಳೀಯ ಪೊಲೀಸರು ಪ್ರತಿಕ್ರಿಯಿಸಿದ್ದು, ನಾಪತ್ತೆಯಾಗಿರುವ ದಂಪತಿ ಹುಡುಕಾಟದಲ್ಲಿದ್ದೇವೆ. ದಟ್ಟ ಅರಣ್ಯ ಪ್ರದೇಶವಾಗಿರುವುದರಿಂದ ಕಾರ್ಯಾಚರಣೆಗೆ ಭಾರೀ ತೊಂದರೆಯುಂಟಾಗುತ್ತಿದೆ. ಕೊನೆಯದಾಗಿ ಅವರಿಬ್ಬರ ಮೊಬೈಲ್ ಲೊಕೇಶ್ ಓಸ್ರಾ ಬೆಟ್ಟದ ಸಮೀಪ ಪತ್ತೆಯಾಗಿದೆ. ಅವರು ಬಳಸಿದ್ದ ಸ್ಕೂಟರ್ ಕೂಡ ಪತ್ತೆಯಾಗಿದೆ. ಇನ್ನು ಇಲ್ಲೇ ಸಮೀಪವೊಂದು ಹಲವು ಕ್ರಿಮಿನಲ್ ಚಟುವಟಿಕೆಗಳಿಗೆ ಕುಖ್ಯಾತಿ ಪಡೆದಿದ್ದ ರೆಸಾರ್ಟ್‌ಗೂ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ ಎಂದಿದ್ದಾರೆ.

ಇಂತಹದ್ದೇ ಒಂದು ಪ್ರಕರಣ ಈ ಹಿಂದೆಯೂ ನಡೆದಿತ್ತು!

ಇದೇ ರೀತಿಯ ಘಟನೆ ಈ ಹಿಂದೆಯೂ ಈ ಪ್ರದೇಶದಲ್ಲಿ ನಡೆದಿತ್ತು. ಪುಸ್ಕಾಸ್ ಝೋಲ್ಟ್ ಎಂಬ ಹಂಗೇರಿಯನ್ ಪ್ರವಾಸಿಗನೊಬ್ಬ ನಿಗೂಢವಾಗಿ ಕಣ್ಮರೆಯಾಗಿದ್ದರು ಘಟನೆ ನಡೆದ 12 ದಿನಗಳ ನಂತರ ರಾಮ್‌ಡೈಟ್ ಗ್ರಾಮದ ಬಳಿ ಆತ ಶವವಾಗಿ ಪತ್ತೆಯಾಗಿದ್ದ. ಪೊಲೀಸರು ಇದೊಂದು ಆಕಸ್ಮಿಕ ಸಾವು ಪ್ರಕರಣ ಎಂದು ಘೋಷಿಸಿ ಕೇಸ್ ಅನ್ನು ಮುಚ್ಚಿ ಹಾಕಿದ್ದರು ಎಂಬ ಆರೋಪ ಕೇಳಿಬಂದಿತ್ತು.

ಬಂಟ್ವಾಳ ರಹಿಮಾನ್ ಕೊಲೆ ಕೇಸ್; ಮೂವರು ಆರೋಪಿಗಳು ಅರೆಸ್ಟ್

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ನಡೆದ ಅಬ್ದುಲ್ ರಹಿಮಾನ್ (32) ಹತ್ಯೆ ಮತ್ತು ಕಲಂದರ್ ಶಾಫಿ ಮೇಲಿನ ಕೊಲೆ ಯತ್ನ ಪ್ರಕರಣ ಸಂಬಂಧ ಮೂವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಬಂಟ್ವಾಳ ತಾಲೂಕಿನ ಕುರಿಯಾಳ ಗ್ರಾಮದ ಈರಾ–ಕೋಡಿ ಎಂಬಲ್ಲಿ ಕೊಳತ್ತಮಜಲು ಜುಮ್ಮಾ ಮಸೀದಿ ಕಾರ್ಯದರ್ಶಿ ಪಿಕಪ್ ಚಾಲಕ ಅಬ್ದುಲ್ ರಹಿಮಾನ್ ಅವರ ಕೊಲೆ ಮತ್ತು ಕಲಂದರ್ ಶಾಫಿ ಕೊಲೆ ಯತ್ನ ಮಂಗಳವಾರ ನಡೆದಿತ್ತು. ಪ್ರಮುಖ ಆರೋಪಿಗಳಾದ ದೀಪಕ್, ಸುಮಿತ್ ಸೇರಿ ಮೂವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ ಎನ್ನಲಾಗಿದೆ. ಪ್ರಕರಣದಲ್ಲಿ ದೀಪಕ್ ಮತ್ತು ಸುಮಿತ್ ಸ

ವಿಧುಶೇಖರ ಭಾರತಿ ತೀರ್ಥ ಶ್ರೀಗಳಿಗೆ ಶಿಬಾರಕ್ಕೆ ಪೂರ್ಣಕುಂಭ ಸ್ವಾಗತ

ದಾವಣಗೆರೆ: ಕೊಂಡಜ್ಜಿ ರಸ್ತೆಯಲ್ಲಿರುವ ಶಿಬಾರ ಶ್ರೀ ಮೈಲಾರ ಲಿಂಗೇಶ್ವರ ದೇವಸ್ಥಾನಕ್ಕೆ ಶ್ರೀ ಕ್ಷೇತ್ರ ಶೃಂಗೇರಿಯ ಮಹಾ ಸಂಸ್ಥಾನದ ಜಗದ್ಗುರುಗಳಾದ ವಿಧುಶೇಖರ ಭಾರತಿತೀರ್ಥ ಮಹಾಸ್ವಾಮಿಗಳವರನ್ನು ಪೂರ್ಣ ಕುಂಭದೊಂದಿಗೆ ಸ್ವಾಗತಿಸಲಾಯಿತು.

ಶ್ರೀಗಳಿಂದ ಶಿಬಾರ ಶ್ರೀ ಮೈಲಾರಲಿಂಗೇಶ್ವರ, ಶ್ರೀ ಗಂಗಮಾಳಮ್ಮ ಹಾಗೂ ಶ್ರೀ ಸಂಪಿಗೆ ಸಿದ್ದೇಶ್ವರ ದೇವರುಗಳ ಪೂಜಾ ಕೈಕರ್ಯ ನೆರವೇರಿಸಲಾಯಿತು. ಶ್ರೀಗಳಿಂದ ಆಶೀರ್ವಚನ ಪ್ರಸಾದ ವಿನಿಯೋಗ ಕಾರ್ಯಕ್ರಮ ನೆರವೇರಿತು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರಾದ ಶ್ರೀಕಾಂತಭಟ್ಟರು ಹಾಗೂ ಸುರೇಶ್ ಕುಲ್ಕರ್ಣಿ ಹಾಗು ವೇದಬ್ರಹ್ಮ ಎಂ. ಪ್ರಮೋದ್ ಭಟ್, ಶ್ರೀ ಕ್ಷೇತ್ರ ಮೈಲಾರ ಪ್ರಧಾನ ಅರ್ಚಕರಿಗೆ ಈ ಸಂದರ್ಭದಲ್ಲಿ ಸನ್ಮಾನ ಮಾಡಲಾಯಿತು. ದೇವಸ್ಥಾನದ ಅಭಿವೃದ್ಧಿ ಹಾಗೂ ಕಟ್ಟಡ ನಿರ್ಮಾಣದ ಬಗ್ಗೆ ಟ್ರಸ್ಟಿನ ಅಧ್ಯಕ್ಷರಾದ ಕೆ.ಹೆಚ್. ಮಲ್ಲೇಶ್‌ರವರು ವಿವರಣೆ ನೀಡಿದರು. ಟ್ರಸ್ಟ್ನ ಕಾರ್ಯದರ್ಶಿ ಹೆಚ್. ಜೆ. ವೀರಣ್ಣ ಹಾಗೂ ಖಜಾಂಚಿ ಜಯಣ್ಣ ಬಳ್ಳಾ ,ಮಾಲತೇಶ್ ರಾವ್ ಜಾಧವ್ ಮತ್ತು ಜಯಪ್ರಕಾಶ್ ಉಪಸ್ಥಿತರಿದ್ದರು. ಹಿರಿಯ ಸದಸ್ಯರಾದ ಜಿ.ಕೆ. ಪಂಚಣ್ಣ ಸ್ವಾಗತಿಸಿದರು, ಸಹ ಕಾರ್ಯದರ್ಶಿ ಗೋಪಾಲ್ ರಾವ್ ಸಾವಂತ್ ವಂದನಾರ್ಪಣೆ ನರವೇರಿಸಿದರು.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳ : ಕೋವಿಡ್ ಪರೀಕ್ಷೆ ಆರಂಭ

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗ–ಡೆ ಮಾಡಿದ್ದು, ನಾಳೆಯಿಂದ ಕೋವಿಡ್ ಪರೀಕ್ಷೆಯನ್ನು ಆರಂಭಿಸಲು ಮುಂದಾಗಿದೆ.

ಕಳೆದ ಕೆಲ ದಿನಗಳಿಂದ ರಾಜ್ಯದಲ್ಲಿ ಕೋವಿಡ್ ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನಿನ್ನೆಸಭೆ ನಡೆಸಿದ್ದ ಕೋವಿಡ್ ತಾಂತ್ರಿಕ ಸಮಿತಿ ಕೋವಿಡ್ ಪರೀಕ್ಷೆಗಳನ್ನು ಪುನಾರಂಭಿಸಲು ಶಿಫಾರಸ್ಸು ಮಾಡಿದ್ದು, ಅದರಂತೆ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಟೆಸ್ಟ್‌ಗಳನ್ನು ಆರಂಭಿಸಲು ಮುಂದಾಗಿದ್ದು, ಪರೀಕ್ಷೆ ಲ್ಯಾಬ್‌ಗಳನ್ನು ಪುನಾರಂಭಿಸಲು ನಿರ್ಧರಿಸಿದೆ.

ರಾಜ್ಯದ ವಿವಿಧೆಡೆ 8 ಆರ್‌ಟಿಪಿಸಿಆರ್ ಪರೀಕ್ಷೆ ಲ್ಯಾಬ್‌ಗಳನ್ನು ಆರಂಭಿಸುವ ನಿರ್ಧಾರ ಮಾಡಲಾಗಿದೆ. ರಾಜ್ಯದ ಆಯ್ದ ಸರ್ಕಾರಿ ಆಸ್ಪತ್ರೆ, ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಜಿಲ್ಲಾಸ್ಪತ್ರೆಗಳಲ್ಲಿ ಕೋವಿಡ್ ಪರೀಕ್ಷೆಗಳ ಆರಂಭಕ್ಕೆ ಸಿದ್ಧತೆ ನಡೆದಿದ್ದು, ನಾಳೆಯಿಂದಲೇ ಕೋವಿಡ್ ಪರೀಕ್ಷೆಗಳು ಆರಂಭವಾಗಲಿದೆ.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಆರಂಭಿಕವಾಗಿ ಉಸಿರಾಟದ ತೊಂದರೆ, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಕೋವಿಡ್ ಪರೀಕ್ಷೆಯನ್ನು ಕಡ್ಡಾಯ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದು, ಈ ಬಗ್ಗೆ ಇಂದು ಸಂಜೆಯೊಳಗೆ ಸುತ್ತೋಲೆಯನ್ನು ಹೊರಡಿಸಲಾಗುವುದು, ಆರೋಗ್ಯ ಇಲಾಖೆಯ ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ಇದುವರೆಗೂ 35 ಕೋವಿಡ್ ಸಕ್ರಿಯ ಪ್ರಕರಣಗಳಿದ್ದು, ಅದರಲ್ಲಿ ಬೆಂಗಳೂರಿನಲ್ಲೇ 32 ಕೋವಿಡ್ ಪ್ರಕರಣಗಳು ದೃಢಪಟ್ಟಿದ್ದು, ಇಂದೂ ಸಹ ಬೆಂಗಳೂರಿನಲ್ಲಿ ಮೂವರಿಗೆ ಕೋವಿಡ್ ಪ್ರಕರಣಗಳು ದೃಢಪಟ್ಟಿವೆ ಎಂದು ಹೇಳಲಾಗಿದೆ.

ರಾಜ್ಯದಲ್ಲಿ ಕೊರೊನಾ ಸೋಂಕು ಹೆಚ್ಚಾದ ಹಿನ್ನೆಲೆಯಲ್ಲಿ ಕೊರೊನಾ ನಿಯಂತ್ರಣ ಸಂಬಂಧ ಕೈಗೊಳ್ಳಲು ರಚಿಸಲಾಗಿರುವ ತಾಂತ್ರಿಕ ಸಮಿತಿ ನಿನ್ನೆಸಭೆ ನಡೆಸಿ ಕೊರೊನಾ ಸೋಂಕು ಹೆಚ್ಚಳದ ಬಗ್ಗೆ ಸುದೀರ್ಘವಾಗಿ ಚರ್ಚೆ ನಡೆಸಿದೆ. ಇಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಸಹ ಆರೋಗ್ಯ ಇಲಾಖೆಯ ಅಧಿಕಾರಿಗಳ ಜತೆ ಸಭೆ ನಡೆಸಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚೆ ನಡೆಸಿದರು.

ಮಾರ್ಗಸೂಚಿ ಬಿಡುಗಡೆ, ಮಾಸ್ಕ್ ಧರಿಸಲು ಸಲಹೆ: ದೇಶದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವ

ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗ–ಡೆ ಮಾಡಿದ್ದು, ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮಾಸ್ಕ್ ಧರಿಸಿ ಓಡಾಡುವಂತೆ ಹಾಗೂ ನೈರ್ಮಲ್ಯ ಕಾಪಾಡಲು ಸ್ಯಾನಿಟೈಸರ್‌ಗಳನ್ನು ಬಳಸುವಂತೆ ಸಾರ್ವಜನಿಕರಿಗೆ ಸಲಹೆ ಮಾಡಿದೆ.

ದೇಶದಲ್ಲಿ ಕೋವಿಡ್ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿದ್ದು ಮಹಾರಾಷ್ಟ್ರದಲ್ಲಿ ಮೂರು ಮಂದಿ ಕೋವಿಡ್‌ಗೆ ಬಲಿಯಾಗಿದ್ದಾ–ರೆ ಎಂದು ಹೇಳಲಾಗಿದ್ದು ಮಹಾರಾಷ್ಟ್ರ, ದೆಹಲಿ, ಆಂಧ್ರಪ್ರದೇಶ, ಕೇರಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಈಗಾಗಲೇ ಮುನ್ನೆಚ್ಚೆರಿಕೆ ಕ್ರಮಗಳನ್ನು ಕೈಗೊಂಡಿದ್ದು, ಆಂಧ್ರದಲ್ಲಿ ಮಾಸ್ಕ್ ಧರಿಸುವುದನ್ನು ಕಡ್ಡಾಯ ಮಾಡಲಾಗಿದೆ.

ದೆಹಲಿ, ಮಹಾರಾಷ್ಟ್ರದಲ್ಲೂ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಲಾಗಿದ್ದು, ಕರ್ನಾಟಕ ಸರ್ಕಾರ ಸಹ ಕೋವಿಡ್ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ರಾಜ್ಯದಲ್ಲಿ ಒಟ್ಟು 35 ಕೋವಿಡ್ ಸಕ್ರಿಯ ಪ್ರಕರಣಗಳು ದಾಖಲಾಗಿದ್ದು, ಅವುಗಳ ಪೈಕಿ 32 ಪ್ರಕರಣಗಳು ಬೆಂಗಳೂರಿನಲ್ಲಿ ದೃಢಪಟ್ಟಿವೆ.ಕೋವಿಡ್ ಪರಿಸ್ಥಿತಿ ಆತಂಕಗೊಳ್ಳುವರಷ್ಟರ ಮಟ್ಟಿಗೆ ಇಲ್ಲವಾದರೂ ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಕಳೆದ 20 ದಿನಗಳಲ್ಲಿ ಏಕಾಏಕಿ ಕೋವಿಡ್ ಪ್ರಕರಣಗಳು ಹೆಚ್ಚಳ ಕಂಡು ಬಂದಿದೆ. ಹಾಗಾಗಿ, ಮಕ್ಕಳು, ವೃದ್ಧರು ಹಾಗೂ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವವರು ಮುನ್ನೆಚ್ಚೆರಿಕೆ ವಹಿಸಬೇಕು ಎಂದು ರಾಜ್ಯ ಆರೋಗ್ಯ ಇಲಾಖೆ ಸಲಹೆ ಮಾಡಿದೆ.

ರಾಜ್ಯದಲ್ಲಿ 2025ರಲ್ಲಿ ಕೋವಿಡ್ ಸಂಬಂಧಿತ ಸಾವುಗಳು ವರದಿಯಾಗಿಲ್ಲ. ಆದರೂ ಸೋಂಕು ಹರಡುವುದನ್ನು ತಡೆಯಲು ಎಚ್ಚರಿಕೆ ಅವಶ್ಯ. ಹಾಗಾಗಿ ಗರ್ಭಿಣಿಯರು, ಮಕ್ಕಳು, ಇತರೆ ಕಾಯಿಲೆಗಳಿಂದ ಬಳಲುತ್ತಿರುವವರು, ಮತ್ತು ರೋಗ ನಿರೋಧಕ ಶಕ್ತಿ ಕಡಿಮೆ ಇರುವವರು. ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮುಖಕ್ಕೆ ಮಾಸ್ಕ್ ಧರಿಸಿ ಓಡಾಡಲು ಆರೋಗ್ಯ ಇಲಾಖೆ ಸಲಹಾರೂಪದ ಸೂಚನೆ ನೀಡಿದೆ. ಸಾರ್ವಜನಿಕರು ಕೈಗಳ ನೈರ್ಮಲ್ಯವನ್ನು ಕಾಪಾಡಿಕೊಳ್ಳಲು ಹ್ಯಾಂಡ್ ಸ್ಯಾನಿಟೈಸರ್‌ಗಳನ್ನು ಬಳಸಲು ಸಲಹೆ ನೀಡಲಾಗಿದೆ. ತೀವ್ರ ಉಸಿರಾಟದ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವವರು ಸಕಾಲಿಕವಾಗಿ ಚಿಕಿತ್ಸೆಯನ್ನು ಪಡೆಯಬೇಕು. ಸಂಭಾವ್ಯ ಅಪಾಯ ತಡೆಗಟ್ಟಲು ಕೋವಿಡ್ –19 ಪರೀಕ್ಷೆಯನ್ನು ತಕ್ಷಣವೇ ಮಾಡಿಕೊಳ್ಳಲು ಸಲಹೆ ನೀಡಲಾಗಿದೆ.

ಆತಂಕ,ಗಾಬರಿಬೇಡದಿನೇಶ್‌ಗುಂಡೂರಾವ್: ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಗಂಭೀರ ಪರಿಸ್ಥಿತಿ ಇಲ್ಲ ಯಾರೂ ಆತಂಕ–ಕ್ಕೆ ಒಳಗಾಗುವ ಅಗತ್ಯವೂ ಇಲ್ಲ, ಸರ್ಕಾರ ಮುನ್ನೆಚ್ಚೆರಿಕೆಯಾಗಿ ಕೋವಿಡ್ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ. ಹಾಗೆಯೇ ಸಾರಿ ಪ್ರಕರಣಗಳಲ್ಲಿ ಕೋವಿಡ್ ಪರೀಕ್ಷೆಗಳನ್ನು ಕಡ್ಡಾಯ ಮಾಡುವಂತೆ ಸೂಚನೆ ನೀಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದೇಶದಲ್ಲೇ ಕೋವಿಡ್‌ನ 257 ಸಕ್ರಿಯ ಪ್ರಕರಣಗಳಿವೆ ಗಂಭೀರ ಪ್ರಕರಣಗಳು ವರದಿಯಾಗಿಲ್ಲ. ಹಾಗಾಗಿ ಯಾರೂ ಭಯಪಡುವ ಅಗತ್ಯವಿಲ್ಲ. ಎಂದಿನಂತೆ ಪ್ರವಾಸ ಎಲ್ಲವನ್ನೂ ಮಾಡಬಹುದು. ರಾಜ್ಯದಲ್ಲಿ ಕಾಣಿಸಿಕೊಂಡಿರುವ ಸಕ್ರಿಯ ಪ್ರಕರಣಗಳ ತೀವ್ರತೆಯೂ ಕಡಿಮೆ ಇದೆ. ಗಾಬರಿ ಬೀಳುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಬೆಳಗಾವಿಯಲ್ಲಿ ಮೊದಲ ಕೊರೊನಾ ಪತ್ತೆ

ಗಡಿ ಜಿಲ್ಲೆ ಬೆಳಗಾವಿಯಲ್ಲಿ 25 ವರ್ಷದ ಗರ್ಭಿಣಿಯಲ್ಲಿ ಕೋವಿಡ್ ಸೋಂಕು ಕಾಣಿಸಿಕೊಂಡಿದೆ. ಸೋಂಕಿತ ಮಹಿಳೆಗೆ ಬೆಳಗಾವಿ ಆಸ್ಪತ್ರೆಯಲ್ಲಿ ಚಿಕಿತ್ಸೆನೀಡಲಾಗುತ್ತಿದೆ.

ಮೈಸೂರು: 600 ಕೋಟಿ ರೂ. ಗೂ ಅಧಿಕ ವೆಚ್ಚದ ಅನುಭವ ಮಂಟಪ ಮುಂದಿನ ವರ್ಷ ಲೋಕಾರ್ಪಣೆ– ಸಿಎಂ ಸಿದ್ದರಾಮಯ್ಯ

ಮೈಸೂರು: ಬೀದರ್ ಜಿಲ್ಲೆ ಬಸವನ ಕಲ್ಯಾಣ ತಾಲ್ಲೂಕಿನಲ್ಲಿ ಸುಮಾರು 600 ಕೋಟಿಗೂ ಅಧಿಕ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 'ವಿಶ್ವದ ಮೊದಲ ಸಂಸತ್ತಿನ ಪ್ರತಿಬಿಂಬ' ಅನುಭವ ಮಂಟಪವನ್ನು ಮುಂದಿನ ವರ್ಷ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬಸವ ಬಳಗಗಳ ಒಕ್ಕೂಟ, ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಆಯೋಜಿಸಿದ್ದ "ಬಸವ ಜಯಂತಿ–2025" "ನಮ್ಮ ನಡೆ ಅನುಭವ ಮಂಟಪದ ಕಡೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ಸಕಲ ವೃತ್ತಿಗಳೂ ಪವಿತ್ರ ಎನ್ನುವ ಮಹಾನ್ ಮಾನವೀಯ ಸಂದೇಶವನ್ನು ಜಗತ್ತಿಗೆ ನೀಡಿದ ಬಸವಣ್ಣನವರು ಕ್ರಾಂತಿಪುರುಷ ಮಾತ್ರವಲ್ಲ, ವಿಶ್ವವಿಖ್ಯಾತ ಆರ್ಥಿಕ ತಜ್ಞರಾಗಿದ್ದರು. ಕಾಯಕ ಮತ್ತು ದಾಸೋಹದ ಶ್ರಮ ಸಂಸ್ಕೃತಿಯ ಮಹತ್ವವನ್ನು ಇಡೀ ವಿಶ್ವಕ್ಕೆ ನೀಡಿದರು ಎಂದು ಸ್ಮರಿಸಿದರು.

ಬಸವಾದಿ ಶರಣರಿಂದ ಆದ ಜಾತಿ ವ್ಯವಸ್ಥೆ ವಿರುದ್ಧದ ಸಾಮಾಜಿಕ ಕ್ರಾಂತಿ ಪ್ರಪಂಚದ ಬೇರೆ ಎಲ್ಲೂ ನಡೆದಿಲ್ಲ. ಸಮ ಸಮಾಜ ಮತ್ತು ಜಾತ್ಯತೀತ ಸಮಾಜ ನಿರ್ಮಾಣಕ್ಕಾಗಿ ಹೋರಾಡಿದ ಬಸವಾದಿ ಶರಣರು ನುಡಿದಂತೆ ನಡೆದರು ಎಂದು ಹೇಳಿದರು.

ಜಾತಿ, ವರ್ಗ ರಹಿತ ಮಾನವೀಯ ಸಮಾಜ ಅವರ ತುಡಿತವಾಗಿತ್ತು. ಬಸವಾದಿ ಶರಣರ ಅನುಭಾವವೇ ವಚನಗಳಾಗಿವೆ. ವಚನ ಎಂದರೆ ಮಾತು. ಕನ್ನಡ ಸಾಹಿತ್ಯದಲ್ಲಿ ವಚನ ಮತ್ತು ದಾಸ ಸಾಹಿತ್ಯ ದೊಡ್ಡ ಮೈಲಿಗಲ್ಲು. ಅಕ್ಷರ ಸಂಸ್ಕೃತಿಯಿಂದ ವಂಚಿತರನ್ನಾಗಿ ಮಾಡಲಾಗಿದ್ದವರಿಗೆ ವಚನ ಸಾಹಿತ್ಯ ಆಡು ಮಾತಿನ ಮೂಲಕ ತಲುಪಿತು. ಸಂಸ್ಕೃತ ಕಲಿಯುವ ಶೂದ್ರರ ಕಿವಿಗೆ ಕಾದ ಸೀಸ ಹುಯ್ಯುವ ಶಿಕ್ಷೆ ಇದ್ದುದ್ದರಿಂದ ಶೂದ್ರ ಸಮುದಾಯ ಶಿಕ್ಷಣದಿಂದ ವಂಚಿತರಾದರು ಎಂದು ತಿಳಿಸಿದರು.

ನನ್ನ ಅಪ್ಪ, ಅಮ್ಮ ಇಬ್ಬರೂ ಶಿಕ್ಷಣದಿಂದ ವಂಚಿತರಾಗಿದ್ದರು. ರಾಜಪ್ಪ ಮೇಸ್ಟ್ರು ಕಾರಣದಿಂದ ನಾನು ನೇರವಾಗಿ ಐದನೇ ತರಗತಿಗೆ ದಾಖಲಾಗಿ ಶಿಕ್ಷಣ ಪಡೆದು ಎರಡು ಬಾರಿ ಮುಖ್ಯಮಂತ್ರಿಯಾದೆ. ಅಂಬೇಡ್ಕರ್ ಅವರ ಕಾರಣದಿಂದ ನನಗೆ ಶಿಕ್ಷಣ ಸಿಕ್ಕರೆ, ಸಂವಿಧಾನದ ಕಾರಣದಿಂದ ನಾನು ಮುಖ್ಯಮಂತ್ರಿಯಾದೆ. ಬಸವ ಬಳಗಗಳ ಒಕ್ಕೂಟದ ಬೇಡಿಕೆಯಂತೆ ಬಸವ ಭವನ ನಿರ್ಮಿಸಲು ಹೆಚ್ಚಿನ ಅನುದಾನವನ್ನು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಮಹಾರಾಣಿ ಕ್ಲಸ್ಟರ್ ವಿ.ವಿ ಹಂಗಾಮಿ ವಿಸಿಯಾಗಿ ಮೀರಾ ಬಿಕೆ ನೇಮಕ: ರಾಜ್ಯಪಾಲರ ಆದೇಶ ರದ್ದುಗೊಳಿಸಿದ ಹೈಕೋರ್ಟ್

ಬೆಂಗಳೂರು: ವಿಶ್ವವಿದ್ಯಾಲಯಗಳ ಕುಲಪತಿ ಹಾಗೂ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಡಾ. ಮೀರಾ ಬಿ.ಕೆ. ಅವರನ್ನು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಹಂಗಾಮಿ ಉಪಕುಲಪತಿ (ಗಿಅ) ಆಗಿ ನೇಮಕ ಮಾಡಿದ್ದನ್ನು ಹೈಕೋರ್ಟ್ ರದ್ದುಗೊಳಿಸಿದೆ. ಆದರೂ, ಹೈಕೋರ್ಟ್ ಕಾನೂನಿನ ಪ್ರಕಾರ ಹಂಗಾಮಿ ಉಪಕುಲಪತಿಯನ್ನು ನೇಮಿಸಲು ಕುಲಪತಿಗೆ ಸ್ವಾತಂತ್ರ್ಯ ನೀಡಿದೆ.

ನ್ಯಾಯಮೂರ್ತಿ ಆರ್. ನಟರಾಜ್ ಇತ್ತೀಚೆಗೆ ಆದೇಶ ಹೊರಡಿಸಿದ್ದು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಮಾನವಿಕ ಮತ್ತು ಲಿಬರಲ್ ಆರ್ಟ್ಸ್ ಶಾಲೆಯ ನಿರ್ದೇಶಕ ಡಾ. ಟಿ.ಎಂ. ಮಂಜುನಾಥ್ ಅವರು ಮಾರ್ಚ್ 28ರಂದು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ. ಮೀರಾ ಅವರನ್ನು ಹಂಗಾಮಿ ವಿ.ಸಿ.ಯಾಗಿ ನೇಮಕ ಮಾಡಲು ಕುಲಪತಿ ಹೊರಡಿಸಿದ ಅಧಿಸೂಚನೆಯನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಭಾಗಶಃ ಅಂಗೀಕರಿಸಿದ್ದಾರೆ. ಡಾ. ಉಷಾದೇವಿ ಸಿ. ನಿವೃತ್ತಿಯ ನಂತರ ಅವರನ್ನು ಹಂಗಾಮಿ ವಿ.ಸಿ.ಯಾಗಿ ನೇಮಿಸಲಾಗಿದೆ.

ಅರ್ಜಿದಾರರು ಅವರನ್ನು ಹಂಗಾಮಿ ವಿ.ಸಿ.ಯಾಗಿ

ನೇಮಿಸಲು ಕುಲಪತಿಗೆ ನಿರ್ದೇಶನವನ್ನು ಕೋರಿದ್ದಾ–ರೆ. ಆದಾಗ್ಯೂ, ಅರ್ಜಿದಾರರು ತಮ್ಮನ್ನು ಮಾತ್ರ ಹಂಗಾಮಿ ವಿಸಿಯಾಗಿ ನೇಮಿಸಬೇಕು ಎಂಬ ಹೇಳಿಕೆಯನ್ನು ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ. ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ, 2000 ರ ಸೆಕ್ಷನ್ 16(2) ರ ಪ್ರಕಾರ ಹಂಗಾಮಿ ವಿಸಿಯನ್ನು ನೇಮಿಸುವ ಬಗ್ಗೆ ಪರಿಗಣಿಸಲು ಕುಲಪತಿಗಳಿಗೆ ಸ್ವಾತಂತ್ರ್ಯವಿದೆ. ಅರ್ಜಿದಾರರು ಅರ್ಹರಾಗಿದ್ದರೆ, ಕಾನೂನಿನ ಪ್ರಕಾರ ಅರ್ಜಿದಾರರನ್ನು ನೇಮಿಸುವ ಬಗ್ಗೆ ಕುಲಪತಿಗಳು ಪರಿಗಣಿಸಬಹುದು ಎಂದು ನ್ಯಾಯಾಲಯ ಹೇಳಿದೆ.

ಮುಸ್ಲಿಂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಆಹ್ವಾನ

ದಾವಣಗೆರೆ: ಪ್ರಸಕ್ತ ಸಾಲಿನ ಎಸ್ಸೆಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ಎಲ್ಲಾ ಮುಸ್ಲಿಂ ವಿದ್ಯಾರ್ಥಿಗಳಿಗೆ ದುಮ್ಮಿ ಹುಸೇನ್ ಸಾಬ್ ಶೈಕ್ಷಣಿಕ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರಕ್ಕೆ ಆಹ್ವಾನಿಸಲಾಗಿದೆ.

ಆರ್ಹ ವಿದ್ಯಾರ್ಥಿಗಳು ಗೇಮ್ಸ್ ಗ್ಯಾಲಕ್ಸಿ, ವಿದ್ಯಾನಗರ ಮುಖ್ಯರಸ್ತೆ, ದಾವಣಗೆರೆ ಇಲ್ಲಿ ಅರ್ಜಿ ಪಡೆದು ಆಧಾರ್ ಮತ್ತು ಅಂಕಪಟ್ಟಿಯೊಂದಿಗೆ ಜೂನ್. 25ರ ಒಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಫೋಟೋ ಲಗತ್ತಿಸಿ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ: 9448729083 ಕ್ಕೆ ಸಂಪರ್ಕಿಸಬಹುದು ಎಂದು ಟ್ರಸ್ಟ್ನ ಅಧ್ಯಕ್ಷ ಡಾ. ಡಿ. ಅಬ್ದುಲ್ ಬುಡನ್ ತಿಳಿಸಿದ್ದಾರೆ.

ಹಲ್ಲೆ ಯತ್ನ: ಕಲಬುರಗಿ ಎಸ್‌ಪಿ ವಿರುದ್ಧ ಸಭಾಪತಿಗೆ ಛಲವಾದಿ ನಾರಾಯಣಸ್ವಾಮಿ ಹಕ್ಕುಚ್ಯುತಿ ದೂರು

ಬೆಂಗಳೂರು: ಕಲಬುರಗಿ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಇತರ ಅಧಿಕಾರಿಗಳ ವಿರುದ್ಧ ಹಕ್ಕುಚ್ಯುತಿ ಪ್ರಸ್ತಾವನೆ ಮಂಡಿಸಲು ಅನುಮತಿ ಕೋರಿ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ಟಿ. ನಾರಾಯಣಸ್ವಾಮಿ ಶುಕ್ರವಾರ ಪರಿಷತ್ತಿನ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರನ್ನು ಸಂಪರ್ಕಿಸಿದರು.

ಹೊರಟ್ಟಿ ಅವರು ಕಚೇರಿಯಲ್ಲಿ ಇಲ್ಲದ ಕಾರಣ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ ವಿಧಾನಸೌಧದ ಆಪ್ತಕಾರ್ಯದರ್ಶಿಗೆ ನಾರಾಯಣಸ್ವಾಮಿ ಪ್ರಸ್ತಾವನೆ ಸಲ್ಲಿಸಿದರು. ಕಲಬುರಗಿ ಜಿಲ್ಲೆ ಚಿತ್ತಾಪುರದಲ್ಲಿ ಇದೇ 21 ರಂದು 'ತಿರಂಗಾಯಾತ್ರೆ' ಕಾರ್ಯಕ್ರಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ತಮ್ಮನ್ನು ಅಕ್ರಮ ಬಂಧನದಲ್ಲಿರಿಸಿ, ಹಲ್ಲೆಗೆ ಪ್ರ

ಪ್ರಶಾಂತ್ ರಾಜಪ್ಪ ನಿರ್ದೇಶನದ ಚಿತ್ರದಲ್ಲಿ ರಿಷಿಗೆ 'ಪದವಿ ಪೂರ್ವ' ಖ್ಯಾತಿಯ ಅಂಜಲಿ ಅನೀಶ್ ಜೋಡಿ

ಪ್ರಶಾಂತ್ ರಾಜಪ್ಪ ನಿರ್ದೇಶನದ ಚೊಚ್ಚಲ ಚಿತ್ರದಲ್ಲಿ ನಟ ರಿಷಿ ನಾಯಕನಾಗಿ ನಟಿಸುತ್ತಿದ್ದು, ಚಿತ್ರ ಇದೀಗ ವೇಗ ಪಡೆಯುತ್ತಿದೆ. ತಮ್ಮ ತೀಕ್ಷ್ಣ ಮತ್ತು ಹಾಸ್ಯಮಯ ಸಂಭಾಷಣೆಗಳಿಗೆ ಹೆಸರುವಾಸಿಯಾದ ಪ್ರಶಾಂತ್, ಇನ್ನೂ ಹೆಸರಿಡದ ಈ ಕಾಮಿಡಿ–ಡ್ರಾಮಾ ಮೂಲಕ ಮೊದಲ ಬಾರಿಗೆ ನಿರ್ದೇಶಕನ ಕ್ಯಾಪ್ ತೊಟ್ಟಿದ್ದಾರೆ.

ಸದ್ಯ ಚಿತ್ರದ ಪಾತ್ರವರ್ಗವನ್ನು ಗೌಪ್ಯವಾಗಿಟ್ಟಿದ್ದರೂ, ಸಿನಿಮಾ ಎಕ್ಸ್‌ಪ್ರೆಸ್‌ಗೆ ಲಭ್ಯವಾಗಿರುವ ಮಾಹಿತಿ ಪ್ರಕಾರ, ಚಿತ್ರಕ್ಕೆ ಅಂಜಲಿ ಅನೀಶ್ ನಾಯಕಿಯಾಗಿ ನಟಿಸಲಿದ್ದಾರೆ ಎಂದು ತಿಳಿದುಬಂದಿದೆ.

ಪದವಿ ಪೂರ್ವ ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟಿದ್ದ ಅಂಜಲಿ, ಇದೀಗ ಆಸಕ್ತಿದಾಯಕ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಅಂಜಲಿ ಮೊದಲ ಬಾರಿಗೆ ನಟ ರಿಷಿ ಜೊತೆಗೆ ತೆರೆ ಹಂಚಿಕೊಳ್ಳಲಿದ್ದಾರೆ.

ಅವರು ಕೊನೆಯ ಬಾರಿಗೆ ಯೋಗರಾಜ್ ಭಟ್ ನಿರ್ದೇಶನದ 'ಮನದ ಕಡಲು' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಅವರು ಸೆಟ್‌ಗೆ ಸೇರಿದ ನಂತರ ಚಿತ್ರತಂಡ ಅವರ ಪಾತ್ರದ ವಿವರಗಳನ್ನು ಬಹಿರಂಗಪಡಿಸಲಿದೆ.

ಚಿತ್ರದ ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯನ್ನು ಪ್ರಶಾಂತ್ ರಾಜಪ್ಪ ಬರೆದಿದ್ದಾರೆ. ಚಿತ್ರಕ್ಕೆ ಅಶೋಕ್ ಅವರ ಛಾಯಾಗ್ರಹಣವಿದೆ. ಚಿತ್ರೀಕರಣವು ಪ್ರಾಥಮಿಕವಾಗಿ ಬೆಂಗಳೂರಿನಲ್ಲಿ ನಡೆಯುತ್ತಿದ್ದು, ಕೆಲವು ಸನ್ನಿವೇಶಗಳನ್ನು ಬೇರೆಡೆ ಯೋಜಿಸಲಾಗಿದೆ.

ತಮಿಳಿನಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ ನಟ ಕಮಲ್ ಹಾಸನ್ ಬೆಂಬಲಕ್ಕೆ ನಿಂತ ನಟ ಕಿಶೋರ್

ಬೆಂಗಳೂರು: 'ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ' ಎಂಬ ತಮಿಳು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿರುವ ಬೆನ್ನಲ್ಲೇ ಬಹುಭಾಷಾ ನಟ ಕಿಶೋರ್ ಅವರು ಕಮಲ್ ಹಾಸನ್ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಮಲ್ ಹಾಸನ್ ಹೇಳಿಕೆಯನ್ನು ಅಷ್ಟೊಂದು ಭಾವುಕವಾಗಿ ನೋಡುವ ಅವಶ್ಯಕತೆ ಇಲ್ಲ. ಭಾಷಾ ಉಗಮದ ನಿಖರ ಮಾಹಿತಿ ಇಲ್ಲ ಎಂದಾದಲ್ಲಿ ಅವರ ಹೇಳಿಕೆ ಅವಮಾನವಲ್ಲ. ತಮಿಳಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ' ಎಂದರು.

'ನನ್ನ ತಾಯಿಯ ಹೊಟ್ಟೆ ಯಿಂದ ನಾನು ಹುಟ್ಟಿ ಬಂದೆ ಎಂದರೆ ನನಗೆ ಹಾಗೂ ನನ್ನ ತಾಯಿಗೆ ಅದು ಅವಮಾನವಲ್ಲ. ಅದನ್ನು ಅವಹೇಳನಕಾರಿ ಎಂದು ಯಾಕೆ ಅಂದುಕೊಳ್ಳಬೇಕು? ತುಂಬಾ ತಿಳಿದಂತಹ ಮನುಷ್ಯ ಏನೋ ಹೇಳಿದ್ದಾರೆ ಎಂದರೆ ಅದಕ್ಕೊಂದು ತರ್ಕ ಇರುತ್ತದೆ. ಅದಕ್ಕೆ ಏನೋ ಒಂದು ಅರ್ಥ ಇರಬೇಕು. ಅದನ್ನು ಪ್ರಶ್ನೆ ಮಾಡಿ, ಏನು ಎಂಬುದನ್ನು ತಿಳಿದುಕೊಳ್ಳಬೇಕು. ಅವರ ಹೇಳಿಕೆಯಿಂದ ಯಾರಿಗೂ ಅವಮಾನವಾಗಿಲ್ಲ' ಎಂದು ಹೇಳಿದರು.

ಎಲ್ಲಾ ಭಾಷೆಗಳು ಎಲ್ಲಿಂದಲೋ ಹುಟ್ಟಿ ಬಂದಿರುತ್ತವೆ. ಹಾಗಂತ ಒಂದು ಭಾಷೆ ಮೇಲು, ಇನ್ನೊಂದು ಭಾಷೆ ಕೀಳು ಎಂಬುದಿಲ್ಲ. ಕನ್ನಡ ಎಲ್ಲಿಂದಲೋ ಹುಟ್ಟಿ ಬಂದಿದೆ, ಹಾಗೆಯೇ ತಮಿಳು ಸಹ ಎಲ್ಲಿಂದಲೂ ಹುಟ್ಟಿ ಬಂದಿದೆ. ಇಂತಹ ವಿಷಯದಲ್ಲಿ ಜನರನ್ನು ಭಾವುಕವಾಗಿ ರೊಚ್ಚಿಗೆಬ್ಬಿಸಬಾರದು ಎಂದು ಸಲಹೆ ನೀಡಿದರು.

ಬೆಂಗಳೂರು: 'ಕನ್ನಡ ಹುಟ್ಟಿದ್ದು ತಮಿಳು ಭಾಷೆಯಿಂದ' ಎಂಬ ತಮಿಳು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿರುವ ಬೆನ್ನಲ್ಲೇ ಬಹುಭಾಷಾ ನಟ ಕಿಶೋರ್ ಅವರು ಕಮಲ್ ಹಾಸನ್ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಮಲ್ ಹಾಸನ್ ಹೇಳಿಕೆಯನ್ನು ಅಷ್ಟೊಂದು ಭಾವುಕವಾಗಿ ನೋಡುವ ಅವಶ್ಯಕತೆ ಇಲ್ಲ. ಭಾಷಾ ಉಗಮದ ನಿಖರ ಮಾಹಿತಿ ಇಲ್ಲ ಎಂದಾದಲ್ಲಿ ಅವರ ಹೇಳಿಕೆ ಅವಮಾನವಲ್ಲ. ತಮಿಳಿಂದ ಕನ್ನಡ ಬಂದಿದೆ ಎಂದಾದರೆ ಸರಿ, ತಪ್ಪೇನಿಲ್ಲ' ಎಂದರು.

'ನನ್ನ ತಾಯಿಯ ಹೊಟ್ಟೆ ಯಿಂದ ನಾನು ಹುಟ್ಟಿ ಬಂದೆ ಎಂದರೆ ನನಗೆ ಹಾಗೂ ನನ್ನ ತಾಯಿಗೆ ಅದು ಅವಮಾನವಲ್ಲ. ಅದನ್ನು ಅವಹೇಳನಕಾರಿ ಎಂದು ಯಾಕೆ ಅಂದುಕೊಳ್ಳಬೇಕು? ತುಂಬಾ ತಿಳಿದಂತಹ ಮನುಷ್ಯ ಏನೋ ಹೇಳಿದ್ದಾರೆ ಎಂದರೆ ಅದಕ್ಕೊಂದು ತರ್ಕ ಇರುತ್ತದೆ. ಅದಕ್ಕೆ ಏನೋ ಒಂದು ಅರ್ಥ ಇರಬೇಕು. ಅದನ್ನು ಪ್ರಶ್ನೆ ಮಾಡಿ, ಏನು ಎಂಬುದನ್ನು ತಿಳಿದುಕೊಳ್ಳಬೇಕು. ಅವರ ಹೇಳಿಕೆಯಿಂದ ಯಾರಿಗೂ ಅವಮಾನವಾಗಿಲ್ಲ' ಎಂದು ಹೇಳಿದರು.

ಎಲ್ಲಾ ಭಾಷೆಗಳು ಎಲ್ಲಿಂದಲೋ ಹುಟ್ಟಿ ಬಂದಿರುತ್ತವೆ. ಹಾಗಂತ ಒಂದು ಭಾಷೆ ಮೇಲು, ಇನ್ನೊಂದು ಭಾಷೆ ಕೀಳು ಎಂಬುದಿಲ್ಲ. ಕನ್ನಡ ಎಲ್ಲಿಂದಲೋ ಹುಟ್ಟಿ ಬಂದಿದೆ, ಹಾಗೆಯೇ ತಮಿಳು ಸಹ ಎಲ್ಲಿಂದಲೂ ಹುಟ್ಟಿ ಬಂದಿದೆ. ಇಂತಹ ವಿಷಯದಲ್ಲಿ ಜನರನ್ನು ಭಾವುಕವಾಗಿ ರೊಚ್ಚಿಗೆಬ್ಬಿಸಬಾರದು ಎಂದು ಸಲಹೆ ನೀಡಿದರು.

ಪುತ್ರನ ಗ್ರಾಜುವೇಷನ್ ಸಂಭ್ರಮಒಂದಾದ ಮಾಜಿ ಜೋಡಿ!

ಒಂದು ಸಮಯದಲ್ಲಿ ಕಾಲಿವುಡ್ ನಲ್ಲಿ ಜನಪ್ರಿಯ ಜೋಡಿಯಾಗಿತ್ತು ಸ್ಟಾರ್ ನಟ ಧನುಷ್ ಮತ್ತು ಸೂಪರ್ ಸ್ಟಾರ್ ರಜನಿಕಾಂತ್ ಪುತ್ರಿ ಐಶ್ವರ್ಯಾ. ಹಲವು ವೈಯಕ್ತಿಕ ಕಾರಣಗಳಿಂದ ಕೆಲ ವರ್ಷಗಳ ಹಿಂದೆ ಜೋಡಿ ಬೇರ್ಪಟ್ಟಿತು. ಆದರೂ ಮಕ್ಕಳ ವಿಚಾರ ಬಂದಾಗ ಒಂದಾಗುತ್ತಾರೆ.

ನಿನ್ನೆ ಈ ಮಾಜಿ ಜೋಡಿಯ ಹಿರಿಯ ಪುತ್ರ ಯಾತ್ರಾ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ್ದಾನೆ. ಇತ್ತೀಚೆಗೆ ಶಾಲೆಯಲ್ಲಿ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ ಧನುಷ್ ತಮ್ಮ ಮಾಜಿ ಪತ್ನಿ ಐಶ್ವರ್ಯಾ ಅವರೊಂದಿಗೆ ಭಾಗವಹಿಸಿದ್ದರು. ಡಿವೋರ್ಸ್ ನಂತರವೂ ಧನುಷ್ ಮತ್ತು ಐಶ್ವರ್ಯಾ ಜೊತೆಯಾಗಿ ಖುಷಿಯಾಗಿ ಕಾಣಿಸಿಕೊಂಡಿದ್ದಾರೆ. ಸದ್ಯ ಈ ಫೋಟೋಗಳು ಸಿಕ್ಕಾಪಟ್ಟೆ ವೈರಲ್ ಆಗಿದ್ದು, ಅಭಿಮಾನಿಗಳು ಖುಷಿಯಾಗಿದ್ದಾರೆ.

ಒಟ್ಟಾಗಿ ಪುತ್ರನನ್ನು ಬಿಗಿದಪ್ಪಿದ ಐಶ್ವರ್ಯಾ–ಧನುಷ್

ಪುತ್ರ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ ಸಂಭ್ರಮದಲ್ಲಿ ಧನುಷ್ ಮತ್ತು ಐಶ್ವರ್ಯಾ ಮಗನನ್ನು ಅಪ್ಪಿಕೊಳ್ಳುವ ಮೂಲಕ ಸಂತೋಷವನ್ನು ವ್ಯಕ್ತಪಡಿಸಿದ್ದರು. ನಟ ಧನುಷ್ ಈ ಕುರಿತ ಫೋಟೋಗಳನ್ನು ತಮ್ಮ ಇನ್ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡು, "ಹೆಮ್ಮೆಯ ಪೋಷಕರು" ಎಂದು ಕ್ಯಾಪ್ಷನ್ ಬರೆದುಕೊಂಡಿದ್ದಾರೆ.

ಧನುಷ್–ಐಶ್ವರ್ಯಾ ಡಿವೋರ್ಸ್

ಕಾಲಿವುಡ್ ನಲ್ಲಿ ಅಂದು ಪ್ರೇಮಪಕ್ಷಿಗಳಾಗಿದ್ದ ಧನುಷ್ ಮತ್ತು ಐಶ್ವರ್ಯಾ 2004ರಲ್ಲಿ ಪೋಷಕರು, ಹಿರಿಯರು, ಸೆಲೆಬ್ರಿಟಿಗಳ ಸಮ್ಮುಖದಲ್ಲಿ ವಿವಾಹವಾದರು. ಲಿಂಗಾ ಮತ್ತು ಯಾತ್ರಾ ಹೆಸರಿನ ಇಬ್ಬರು ಗಂಡು ಮಕ್ಕಳ ಪೋಷಕರಾಗಿದ್ದರು. ಜನವರಿ 17, 2022ರಂದು ಧನುಷ್ ಸೋಶಿಯಲ್ ಮೀಡಿಯಾ ಮೂಲಕ ತಮ್ಮ ಬೇರ್ಪಡುವಿಕೆಯನ್ನು ಘೋಷಿಸಿದರು.

ಯುವ ರಾಜ್‌ಕುಮಾರ್ ನಟನೆಯ 'ಎಕ್ಕ' ಚಿತ್ರ ಬಿಡುಗಡೆ ದಿನಾಂಕ ಮುಂದಕ್ಕೆ; ಜುಲೈನಲ್ಲಿ ತೆರೆಗೆ!

ಯುವ ರಾಜ್‌ಕುಮಾರ್ ಅಭಿನಯದ 'ಎಕ್ಕ' ಚಿತ್ರ ಬಿಡುಗಡೆ ದಿನಾಂಕವನ್ನು ಮುಂದೂಡಲಾಗಿದೆ. ಈ ಮೊದಲು ಜೂನ್ 6 ರಂದು ಚಿತ್ರವನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿತ್ತು. ಆದರೆ, ಚಿತ್ರತಂಡ ಇದೀಗ ಜುಲೈ 18 ರಂದು ಚಿತ್ರವನ್ನು ಬಿಡುಗಡೆ ಮಾಡಲು ಯೋಜನೆ ರೂಪಿಸಿದೆ.

ಡಾಲಿ ಧನಂಜಯ್ ನಟನೆಯ 'ರತ್ನನ್ ಪ್ರಪಂಚ' ಸಿನಿಮಾ ನಿರ್ದೇಶಿಸಿದ್ದ ರೋಹಿತ್ ಪದಕಿ ಈ ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದು, ಕಾರ್ತಿಕ್ ಗೌಡ ಮತ್ತು ಯೋಗಿ ಜಿ. ರಾವ್ ಅವರ ಕೆಆರ್‌ಜಿ ಸ್ಟುಡಿಯೋಸ್, ಜಯಣ್ಣ ಮತ್ತು ಭೋಗೇಂದ್ರ ಅವರ ಜಯಣ್ಣ ಫಿಲ್ಮ್ಸ್ ಮತ್ತು ಅಶ್ವಿನಿ ಪುನೀತ್ ರಾಜ್‌ಕುಮಾರ್ ನೇತೃತ್ವದ ಪಿಆರ್‌ಕೆ ಪ್ರೊಡಕ್ಷನ್ಸ್ ಜಂಟಿಯಾಗಿ ಎಕ್ಕ ಚಿತ್ರವನ್ನು ನಿರ್ಮಿಸಿವೆ.

ರೋಹಿತ್ ಪದಕಿ ಮತ್ತು ಯುವ ರಾಜ್‌ಕುಮಾರ್ ಮೊದಲ ಬಾರಿಗೆ ಒಟ್ಟಾಗಿ ಕೆಲಸ ಮಾಡಿದ್ದಾರೆ. ಈ ಮೊದಲು ಯುವ ರಾಜ್‌ಕುಮಾರ್ ಸಂತೋಷ್ ಆನಂದ್‌ರಾಮ್ ನಿರ್ದೇಶನದ 'ಯುವ' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಇತ್ತೀಚೆಗಷ್ಟೇ ಎಕ್ಕ ಚಿತ್ರದ ಟೀಸರ್ ಬಿಡುಗಡೆಯಾಗಿದ್ದು, ಪುನೀತ್ ರಾಜ್‌ಕುಮಾರ್ ಅವರ ಜಾಕಿ ಚಿತ್ರವನ್ನು ನೆನಪಿಸುತ್ತದೆ.

ಚಿತ್ರದಲ್ಲಿ ಸಂಪದ ಮತ್ತು ಸಂಜನಾ ಆನಂದ್ ನಾಯಕಿಯರಾಗಿ ನಟಿಸಿದ್ದಾರೆ. ಜೊತೆಗೆ ಅತುಲ್ ಕುಲಕರ್ಣಿ ಮತ್ತು ಡೆಲ್ಲಿ ಆದಿತ್ಯ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಚಿತ್ರಕ್ಕೆ ಚರಣ್ ರಾಜ್ ಸಂಗೀತ, ಸತ್ಯ ಹೆಗ್ಡೆ ಅವರ ಛಾಯಾಗ್ರಹಣ ಮತ್ತು ದೀಪು ಎಸ್ ಕುಮಾರ್ ಅವರ ಸಂಕಲನವಿದೆ. ಎಕ್ಕ ಚಿತ್ರ ಸದ್ಯ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದೆ.

ಸಿದ್ದು ಪೂರ್ಣಚಂದ್ರ ನಿರ್ದೇಶನದ 'ಪುಟ್ಟಣ್ಣನ ಕತ್ತೆ' ಸಿನಿಮಾ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆ!

'ದಾರಿ ಯಾವುದಯ್ಯ ವೈಕುಂಠಕ್ಕೆ, ಬ್ರಹ್ಮಕಮಲ, ತಾರಿಣಿ ಚಿತ್ರಗಳಿಂದ ಹೆಸರಾದ ನಿರ್ದೇಶಕ ಸಿದ್ದು ಪೂರ್ಣಚಂದ್ರ ಅವರು, ತಮ್ಮ ಮುಂದಿನ ಚಿತ್ರ 'ಪುಟ್ಟಣ್ಣನ ಕತ್ತೆ' ಶೀರ್ಷಿಕೆ ಘೋಷಿಸಿದ್ದಾರೆ.

ಇದು ಹಿರೋಯಿಸಂ ತೋರಿಸುವ ವಿಶಿಷ್ಟ ಕಥೆಯಲ್ಲ. ಈ ಬಾರಿ ಕತ್ತೆ ಚಿತ್ರದ ಕೇಂದ್ರಬಿಂದುವಾಗಿದೆ. ಶ್ವಾನಗಳಿಗಿಂತಲೂ ವಿನಮ್ರ ಕತ್ತೆಯೊಂದರಲ್ಲಿ ಹಿರೋನನ್ನು ಕಂಡುಕೊಂಡಿದ್ದೇನೆ ಎಂದು ಹೇಳುವ ನಿರ್ದೇಶಕರು, ವಿಶಿಷ್ಟ ನಿರೂಪಣೆಗೆ ಧ್ವನಿ ಹೊಂದಿಸುತ್ತಿದ್ದಾರೆ.

ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದ್ದು, ಪೋಸ್ಟರ್‌ನಲ್ಲಿ ಕತ್ತೆಯನ್ನು ತೋರಿಸಲಾಗಿದೆ. ಈ ಪರಿಕಲ್ಪನೆ ಹುಟ್ಟಿದ ಬಗ್ಗೆ ವಿವರಿಸಿದ ಪೂರ್ಣಚಂದ್ರ, ಎಲ್ಲರೂ ಶ್ವಾನಗಳ ಬಗ್ಗೆ ಚಿತ್ರ ಮಾಡ್ತಾರೆ. ಹಾಗಾಗಿ ನಾನೇಕೆ? ಕತ್ತೆಯೊಂದರ ಚಿತ್ರ ಮಾಡಬಾರದು ಎಂದು ಯೋಚಿಸಿದೆ. ತದನಂತರ ಈ ಚಿತ್ರದ ಕಲ್ಪನೆ ಹೊಳೆಯಿತು ಎಂದು ತಿಳಿಸಿದರು.

ಪುಟ್ಟಣ್ಣನ ಕತ್ತೆ' ಹಳ್ಳಿಯೊಂದರ ಕತ್ತೆಯ ಪ್ರಯಾಣ ಮತ್ತು ಅದರ ಸುತ್ತಲಿನ ಜನರೊಂದಿಗೆ ಬೆಳೆಸಿಕೊಳ್ಳುವ ಬಾಂಧವ್ಯವನ್ನು ಗುರುತಿಸುತ್ತದೆ. ಮಾನವ–

ಪ್ರಾಣಿ ಸಂಬಂಧಗಳಲ್ಲಿನ ಅಸಂಬದ್ಧತೆ ಮತ್ತು ಅನಿರೀಕ್ಷಿತ ಕೋಪ, ತಾಪ ಎಲ್ಲವನ್ನೂ ಬಹಿರಂಗಪಡಿಸುತ್ತದೆ. ಸಹಾನುಭೂತಿ, ಘನತೆ ಮತ್ತು ಸಾಮಾಜಿಕ ನಿಯಮಗಳೊಂದಿಗೆ ಕಥೆ ಸಾಗುತ್ತದೆ.

ಕತ್ತೆಯೊಂದಿಗೆ ಕೆಲಸ ಮಾಡುವುದು ಸುಲಭವಲ್ಲ. ತರಬೇತಿ ಮತ್ತು ಶೂಟಿಂಗ್ ಸವಾಲಿನಿಂದ ಕೂಡಿತ್ತು. ಆದರೆ ತದನಂತರ, ಅದರ ಸಿಬ್ಬಂದಿ ಒಳ್ಳೆಯ ಬಾಂಧವ್ಯ ಮೂಡಿಸಿದರು. ಯಾವುದೇ ತರಬೇತಿ ನೀಡದೆ ಅದರ ವರ್ತನೆ ಅರ್ಥ ಮಾಡಿಕೊಂಡೆವು ಎಂದು ನಿರ್ದೇಶಕರು ಹೇಳಿದರು.

ಚಿತ್ರದಲ್ಲಿ ಅನೀಶ್ ಆರ್ಯನ್, ಭೀಮೇಶ್, ಲಿಯೋ ಶರ್ಮಾ ಮತ್ತು ವಿಭಾ ವಂದನ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಜೊತೆಗೆ ಕಲಾರತಿ ಮಹದೇವ್, ಲಕ್ಕಿ ಶಂಕರ್, ಸಿದ್ದು ಮಂಡ್ಯ, ರಶ್ಮಿ ಮೈಸೂರು, ಬಾಬು, ರೋಹಿಣಿ, ಎನ್‌ಟಿ ರಾಮಸ್ವಾಮಿ, ಮತ್ತು ಕವಿತಾ ಕಂಬಾರರಂತಹ ತಾರಾಗಣವಿದೆ. ತನ್ಮಯ್ ಎಸ್ ಗೌಡರಿಂದ ಪೂರ್ಣಚಂದ್ರ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾಗುತ್ತಿರುವ ಈ ಚಿತ್ರಕ್ಕೆ ರಾಜು ಹೆಮ್ಮಿಗೆಪುರ ಛಾಯಾಗ್ರಹಣ ಒದಗಿಸಿದ್ದು, ಅನಂತ್ ಆರ್ಯನ್ ಸಂಗೀತ ಸಂಯೋಜಿಸಿದ್ದಾರೆ.

'ಆರ' ಖ್ಯಾತಿಯ ರೋಹಿತ್ ಮುಂದಿನ ಚಿತ್ರ ಘೋಷಣೆ; ಆಧ್ಯಾತ್ಮಿಕ ಥ್ರಿಲ್ಲರ್ 'ಸಹ್ಯಾದ್ರಿ'

2023ರಲ್ಲಿ ತೆರೆಕಂಡ 'ಆರ' ಚಿತ್ರದ ಮೂಲಕ ಗಮನ ಸೆಳೆದಿದ್ದ ನಟ, ನಿರ್ದೇಶಕ ರೋಹಿತ್ ಇದೀಗ ತಮ್ಮ ಮುಂದಿನ ಚಿತ್ರಕ್ಕೆ ಸಿದ್ಧರಾಗುತ್ತಿದ್ದಾರೆ. ತಮ್ಮ ಎರಡನೇ ಚಿತ್ರವನ್ನು ಘೋಷಿಸಿರುವ ರೋಹಿತ್, ಚಿತ್ರಕ್ಕೆ 'ಸಹ್ಯಾದ್ರಿ' ಎಂದು ಹೆಸರಿಟ್ಟಿದ್ದಾರೆ. ಚಿತ್ರದ ಶೀರ್ಷಿಕೆಯ ಟೀಸರ್ ರಿಲೀಸ್ ಮೂಲಕ ಮಾಹಿತಿ ನೀಡಲಾಗಿದೆ. ಚಿತ್ರವು ಆಧ್ಯಾತ್ಮಿಕ ಥ್ರಿಲ್ಲರ್ ಎನ್ನಲಾಗಿದೆ.

'ಸಹ್ಯಾದ್ರಿ ಚಿತ್ರವು ಅಸಾಧಾರಣವಾಗಿ ಮೆದುಳಿನಲ್ಲಿ ಹೆಚ್ಚಿನ ಸಂಖ್ಯೆಯ ನರಕೋಶಗಳನ್ನು ಹೊಂದುತ್ತಾ ಅಕಾಲಿಕವಾಗಿ ಜನಿಸಿದ ಮಗುವಿನ ಕಥೆಯನ್ನು ಹೇಳುತ್ತದೆ. ಆ ಮಗು ಬೆಳೆದಂತೆ, ಅಪಾರ ಶಕ್ತಿಗಳನ್ನು ತಡೆದುಕೊಳ್ಳುವ ಮತ್ತು ನಿಯಂತ್ರಿಸುವ ಸಾಮರ್ಥ್ಯವಿರುವ ಪ್ರಬಲ ಶಕ್ತಿಯಾಗಿ ಹೊರಹೊಮ್ಮುತ್ತದೆ. ಈ ನಿರೂಪಣೆಯೊಂದಿಗೆ ನಾನು ಪ್ಯಾನ್ ಇಂಡಿಯಾ ಮಟ್ಟದಲ್ಲಿ ಹೊಸ ಆಧ್ಯಾತ್ಮಿಕ ಥ್ರಿಲ್ಲರ್ ಚಿತ್ರ ನಿರ್ಮಿಸುವ ಗುರಿಯನ್ನು

ಹೊಂದಿದ್ದೇನೆ' ಎನ್ನುತ್ತಾರೆ ರೋಹಿತ್.

ಇದು ಭಾರತೀಯ ಚಿತ್ರರಂಗದಲ್ಲಿ ಸಂಪೂರ್ಣವಾಗಿ ಅನ್ವೇಷಿಸದ ಆಧ್ಯಾತ್ಮಿಕತೆ ಮತ್ತು ಥ್ರಿಲ್ಲರ್ ಸಂಯೋಜನೆಯಾಗಿದೆ. ಚಿತ್ರವು ತೀವ್ರವಾದ ಮತ್ತು ಭಾವನಾತ್ಮಕವಾಗಿ ಬೇರೂರಿದ ಅಂಶವನ್ನು ಒಳಗೊಂಡಿದೆ' ಎಂದು ಅವರು ಹೇಳುತ್ತಾರೆ.

ಚಿತ್ರವನ್ನು ಮೊದಲಿಗೆ ಕನ್ನಡದಲ್ಲಿ ಚಿತ್ರೀಕರಿಸಲಾಗುವುದು. ನಂತರ ತಮಿಳು, ತೆಲುಗು, ಹಿಂದಿ, ಮಲಯಾಳಂ ಮತ್ತು ಇಂಗ್ಲಿಷ್‌ಗೆ ಡಬ್ ಮಾಡುವ ಯೋಜನೆ ಇದೆ. ಪಶ್ಚಿಮ ಘಟ್ಟಗಳ ರಮಣೀಯ ಪ್ರದೇಶಗಳಲ್ಲಿ, ವಿಶೇಷವಾಗಿ ಮಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿತ್ರೀಕರಣ ನಡೆಯಲಿದ್ದು,

ಶೀಘ್ರದಲ್ಲೇ ನಿರ್ಮಾಣ ಪ್ರಾರಂಭವಾಗುವ ನಿರೀಕ್ಷೆಯಿದೆ. ಚಿತ್ರತಂಡ 2026ರ ಜುಲೈನಲ್ಲಿ ಚಿತ್ರ ಬಿಡುಗಡೆ ಮಾಡುವ ಗುರಿಯನ್ನು ಹೊಂದಿದ್ದಾರೆ.

ಎಆರ್ ಫಿಲ್ಮ್ ಬ್ಯಾನರ್ ಅಡಿಯಲ್ಲಿ ರೇಣುಕಾ ಪಿಎನ್ ಅವರ ಬೆಂಬಲದೊಂದಿಗೆ ಸಹ್ಯಾದ್ರಿ ಚಿತ್ರಕ್ಕೆ ಛಾಯಾಗ್ರಾಹಕ ವಿಲಿಯಂ ಡೇವಿಡ್ (ವಿಕ್ರಾಂತ್ ರೋಣ) ಅವರ ಅಡಿಯಲ್ಲಿ ಕೆಲಸ ಮಾಡಿರುವ ವಿನೋದ್ ಲೋಕಣ್ಣನವರ್ ಅವರು ಛಾಯಾಗ್ರಹಣವನ್ನು ನಿರ್ವಹಿಸುತ್ತಾರೆ. ಸಂಗೀತ ಸಂಯೋಜಕ ಅಜನೀಶ್ ಲೋಕನಾಥ್ ಅವರ ಸಹಾಯಕ ನವನಾಥ್ ವಾಸುದೇವ್ ಅವರ ಸಂಗೀತ ಸಂಯೋಜನೆ, ಮಾದೇಶ್ ರಾಜ್ ಅವರು ಸಂಕಲನ ಮತ್ತು ವಿಎಫ್‌ಎಕ್ಸ್ ಅನ್ನು ನೋಡಿಕೊಳ್ಳುತ್ತಾರೆ.

ದೊಡ್ಡವರೆಲ್ಲ ಜಾಣರಲ್ಲ, ಕ್ಷಮೆ ಕೇಳಿದ್ರೆ ಸಣ್ಣವರಾಗಲ್ಲ: ಕನ್ನಡದ ಬಗ್ಗೆ ಕಮಲ್ ಹಾಸನ್ ಹೇಳಿಕೆಗೆ ರಚಿತಾ ರಾಮ್ ತಿರುಗೇಟು

ತಮಿಳಿನಿಂದ ಕನ್ನಡ ಹುಟ್ಟಿತು ಎಂದು ನಟ ಕಮಲ್ ಹಾಸನ್ ಹೇಳಿಕೆಗೆ ವ್ಯಾಪಕ ಟೀಕೆ ವ್ಯಕ್ತವಾಗುತ್ತಿದೆ. ಕನ್ನಡದ ಹಿರಿಯ ನಟ–ನಟಿಯರು ಕಮಲ್ ಹಾಸನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇದೀಗ ನಟಿ ರಚಿತಾ ರಾಮ್ ದೊಡ

ವಿವಿಧ ಬೇಡಿಕೆಗೆ ಆಗ್ರಹಿಸಿ ವಸತಿ ಶಾಲೆಗಳ ಖಾಯಂ ನೌಕರರ ಅನಿರ್ದಿಷ್ಟಾವಧಿ ಮುಷ್ಕರ

ಚಿಕ್ಕಮಗಳೂರು: ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರ ಸಂವಿಧಾನಾತ್ಮಕ ಸಾರ್ವತ್ರಿಕ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಇಂದು ಅಜಾದ್ ವೃತ್ತದಲ್ಲಿ ವಸತಿ ಶಾಲೆಗಳ ನೌಕರರ ಸಂಘದ ಜಿಲ್ಲಾ ಶಾಖೆ ವತಿಯಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಯಿತು.

ಇಂದು ವಸತಿ ಶಾಲೆಗಳ ನೌಕರರ ಸಂಘದ ಜಿಲ್ಲಾಧ್ಯಕ್ಷೆ ದೀಪಾ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ತಮ್ಮ ನ್ಯಾಯಯುತವಾದ ಬೇಡಿಕೆಗಳನ್ನು ಕೂಡಲೇ ಈಡೇರಿಸುವಂತೆ ಒತ್ತಾಯಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಅಧೀನದಲ್ಲಿ ನಡೆಯುತ್ತಿರುವ ಎಸ್ಸಿ, ಎಸ್‌ಟಿ, ಓಬಿಸಿ ವಸತಿ ಶಾಲೆಗಳ ನಿರ್ವಹಣೆಗಾಗಿ ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಸ್ಥಾಪಿಸಬೇಕು ಅಥವಾ ಕ್ರೈಸ್ ಅಧೀನದ ವಸತಿ ಶಾಲೆಗಳನ್ನು ಖಾಯಂ

ಸಿಬ್ಬಂದಿಗಳೊಂದಿಗೆ ಸಂಬಂಧಿಸಿದ ಇಲಾಖೆಗಳ ವಶಕ್ಕೆ ನೀಡಬೇಕೆಂದು ಆಗ್ರಹಿಸಿದರು.

ಆರೋಗ್ಯ ಸಂಜೀವಿನಿ, ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಬೇಕು, ಮರಣ ಮತ್ತು ನಿವೃತ್ತಿ ಉಪದಾನ ಯೋಜನೆಯನ್ನು ಕ್ರೈಸ್ ಖಾಯಂ ನೌಕರರಿಗೆ ವಿಸ್ತರಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ. ಕಳೆದ 12 ವರ್ಷದಿಂದ ಕ್ರೈಸ್ ಸಂಸ್ಥೆ ಮೂಲಕ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ಆದರೆ, ನಮ್ಮನ್ನು ಈವರೆಗೂ ಸರಕಾರಿ ನೌಕರರೆಂದು ಸರಕಾರ ಪರಿಗಣಿಸಿಲ್ಲ. ಸರಕಾರಿ ಶಾಲೆಗಳ ಶಿಕ್ಷಕರಂತೆ ನಾವೂ ಕೂಡ ವಸತಿ ಶಾಲೆಯಲ್ಲಿ ಉತ್ತಮ ಫಲಿತಾಂಶ ನೀಡಿದ್ದರೂ ನಮಗೆ ಮಲತಾಯಿ ಧೋರಣೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ನಗದುರಹಿತ ಚಿಕಿತ್ಸೆಗಾಗಿ ಜ್ಯೋತಿ ಸಂಜೀವಿನಿ ಅನುಷ್ಠಾನಗೊಳಿಸಬೇಕು. ಶಿಕ್ಷಕ ನೌಕರರು ಮರಣ ಹೊಂದಿದರೆ 20 ಲಕ್ಷ ರೂ. ನೀಡಬೇಕು. ನಿವೃತ್ತಿ ಉಪದಾನ ಸೌಲಭ್ಯ ಒದಗಿಸಬೇಕು. ಮನೆ ಬಾಡಿಗೆ ಭತ್ಯೆ ಕಡಿತದಿಂದ ವಿನಾಯಿತಿ ನೀಡುವುದು, ಹೆಚ್ಚುವರಿ ಕಾರ್ಯಾಭಾರ ಇರುವುದರಿಂದ ಶೇ.10 ರಷ್ಟು ವಿಶೇಷ ಭತ್ಯೆ ಮಂಜೂರಾತಿ ಮಾಡುವಂತೆ ಒತ್ತಾಯಿಸಿದರು. ಈ ಎಲ್ಲ ಬೇಡಿಕೆಗಳನ್ನು ಮುಂದಿಟ್ಟು ಬೆಂಗಳೂರಿನಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಗಿದ್ದು, ಆದರೆ, ಸರಕಾರ ಯಾವುದೇ ಸ್ಪಂದನೆ ನೀಡದಿರುವ ಹಿನ್ನೆಲೆಯಲ್ಲಿ 31 ರಂದು ಜಿಲ್ಲಾಧಿಕಾರಿಗೆ ಬೇಡಿಕೆ ಬಗ್ಗೆ ಮನವಿ ಸಲ್ಲಿಸಿದ್ದು, ಇಂದಿನಿಂದ 3 ದಿನಗಳ ಕಾಲ ಅಜಾದ್ ವೃತ್ತದಲ್ಲಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸುತ್ತಿದ್ದೇವೆ ಎಂದರು.

ಪ್ರತಿಭಟನೆಯಲ್ಲಿ ಸಂಘದ ಕಾರ್ಯದರ್ಶಿ ರವಿಕುಮಾರ್, ಸಂಘಟನಾ ಕಾರ್ಯದರ್ಶಿ ಧನರಾಜ್, ಜಗದೀಶ್, ಲಕ್ಷ್ಮಣ್, ರೇಖಾ, ಪ್ರಭುಕುಮಾರ್, ಲಿಂಗರಾಜು, ಮತ್ತಿತರರು ಭಾಗವಹಿಸಿದ್ದರು.

ಬುಡಕಟ್ಟು ಜನಾಂಗ ಶಿಕ್ಷಣ, ಆರೋಗ್ಯದತ್ತ ಗಮನಹರಿಸಿ : ತಮ್ಮಯ್ಯ

ಚಿಕ್ಕಮಗಳೂರು : ಪ್ರಕೃತಿಯ ನಡುವೆ ಜೀವನ ರೂಪಿಸಿಕೊಂಡಿರುವ ಆದಿವಾಸಿಯ ಬುಡ ಕಟ್ಟು ಜನಾಂಗದವರು ಮೊದಲು ಶಿಕ್ಷಣ, ಆರೋಗ್ಯದಲ್ಲಿ ತಮ್ಮನ್ನು ಹೆಚ್ಚು ತೊಡಗಿಸಿಕೊಂಡು ಸಮರ್ಥ ವ್ಯಕ್ತಿಗಳಾಗಬೇಕು ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಕರೆ ನೀಡಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಭಾನುವಾರ ನಡೆದ ಕರ್ನಾಟಕ ಆದಿವಾಸಿ ರಕ್ಷಣಾ ಪರಿಷತ್‌ನ ಜಿಲ್ಲಾ ಘಟಕದಿಂದ ಹಮ್ಮಿಕೊಂಡಿದ್ದ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತ ನಾಡಿದರು.

ಪೂರ್ವಿಕರ ಕಾಲದಿಂದಲೂ ಕಾಡಿನ ಮಧ್ಯೆಯೇ ಬದುಕು ಕಟ್ಟಿಕೊಂಡು ಸಾಗುತ್ತಿರುವ ಜನಾಂಗದವರು ತಮ್ಮ ಮಕ್ಕಳ ಭವಿಷ್ಯವನ್ನು ಶಿಕ್ಷಣದಿಂದ ವಂಚಿತಗೊಳಿಸಬಾರದು. ಐಎಎಸ್, ಐಪಿಎಸ್ ಅಥವಾ ಸರ್ಕಾರಿ ಹುದ್ದೆಗಳ ಕನಸುಗಳನ್ನು ಹೊತ್ತಿರುವ ಮಕ್ಕಳಿಗೆ ಪಾಲಕರು ಎಲ್ಲಾ ಹಂತದಲ್ಲೂ ಪ್ರೋತ್ಸಾಹಿಸಬೇಕು ಎಂದರು.

ಬುಡಕಟ್ಟು ಸಮುದಾಯವನ್ನು ಮೇಲ್ದರ್ಜೆಗೇರಿಸಲು ಕೇಂದ್ರ ಹಾಗೂ ರಾಜ್ಯಸರ್ಕಾರ ಅನೇಕ ಸವಲತ್ತುಗಳನ್ನು

ಪೂರೈಸಿ ಹೊಸಬದುಕನ್ನು ರೂಪಿಸುತ್ತಿದೆ. ಆ ನಿಟ್ಟಿನಲ್ಲಿ ಜನಾಂಗದ ಮಕ್ಕಳು ಕಠಿಣ ಪರಿಶ್ರಮ, ನಿರಂತರ ಕಲಿಕೆಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು. ಜೊತೆಗೆ ಪೂರ್ವಿಕರ ಆಚಾರ–ವಿಚಾರ, ಪೂಜಾಪದ್ಧತಿ, ಹಿಂದಿನ ಕಸುಬುಗಳನ್ನು ಉಳಿಸಬೇಕು ಎಂದು ತಿಳಿಸಿದರು.

ಆದಿವಾಸಿ ಬುಡಕಟ್ಟು ಪರಿಷತ್ ಗೌರವಾಧ್ಯಕ್ಷ ಡಾ॥ಕೆ.ಎಂ.ಮೈತ್ರಿ ಮಾತನಾಡಿ ತಮಿಳುನಾಡು ಹಾ ಗೂ ಕರ್ನಾಟಕದಲ್ಲಿ ಆದಿವಾಸಿ ಜನಾಂಗವು ನೆಲೆಯೂರಿದೆ. ಪ್ರಸ್ತುತ ರಾಜ್ಯಸರ್ಕಾರ ಸಮುದಾಯಕ್ಕೆ ನೀಡುತ್ತಿರುವ ಸೌಕರ್ಯವು ತಮಿಳುನಾಡಿನಲ್ಲಿ ಸಿಗುತ್ತಿಲ್ಲ. ಕೇವಲ ಜಾತಿಪ್ರಮಾಣ ಪತ್ರ ಪಡೆಯಲು ನ್ಯಾಯಾಲಯದ ಮೆಟ್ಟಿಲೇರಬೇಕಿದೆ ಎಂದರು.

ಬುಡಕಟ್ಟು ಜನತೆಯನ್ನು ಹೊರಕಳಿಸುವ ಕೆಲಸಕ್ಕೆ ಕೈಹಾಕಿದರೆ ಸಮುದಾಯವು ಕ್ಷೀಣಿಸಲಿದೆ. ಹೀಗಾಗಿ ಹೊರತೆರಳಿರುವ ಜನರನ್ನು ಮತ್ತೊಮ್ಮೆ ಕರೆತರುವ ಪ್ರಯತ್ನ–ಕ್ಕೆ ಮುಂದಾಗುವ ಮೂಲಕ ಸರ್ಕಾರದ ಮುಂ ದೆ ಶಕ್ತಿ ಪ್ರದರ್ಶಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಜನಾಂಗದ ಸಂತತಿ ಅವಿನಾಶದತ್ತ ಸಾಗಲಿದೆ ಎಂದು ಎಚ್ಚರಿ ಸಿದರು.

ಮುಂದಿನ ಪೀಳಿಗೆಯ ಮಕ್ಕಳಿಗೆ ಕಾಡುವೃಕ್ಷಗಳನ್ನು, ಪೂಜಿಸುವ ಸಂಪ್ರದಾಯ, ಪದ್ಧತಿಗಳನ್ನು ಪರಿಚ ಯಿಸುವುದು ಅತಿಮುಖ್ಯ. ಆಧುನಿಕತೆಗೆ ಒಗ್ಗಿದರೆ ಕಾಲಕ್ರಮೇಣ ಎಲ್ಲಾವು ಮರೆಯಾಗಲಿದೆ. ಜೊತೆಗೆ ಪರಿಷ ತ್‌ನ ಸಭೆ, ವಿಚಾರ ಸಂಕಿರಣ ಕಾರ್ಯಕ್ರಮವನ್ನು ಹಿಂದಿನಂತೆ ವೃಕ್ಷದಡಿ ಅಥವಾ ಜಲಪಾತಗಳ ಸಮೀಪ ನಡೆಸಬೇಕು ಎಂದು ಕಿವಿಮಾತು ಹೇಳಿದರು. ಇತ್ತೀಚೆಗೆ ಅಲೆಮಾರಿ ಜನಾಂಗದ

> **ಈಗಾಗಲೇ ಆದಿವಾಸಿ ಪರಿಷತ್ ರಾಜ್ಯಾದ್ಯಂತ ಸಂಘಟನೆಯಲ್ಲಿ ತೊಡಗಿಸಿಕೊಂಡು ಬುಡಕಟ್ಟು ಜನಾ ಂಗದವರನ್ನು ಒಗ್ಗೂಡಿಸುತ್ತಿದೆ. ಪರಿಷತ್‌ನ ಹೋರಾಟಗಳಿಗೆ ಜನಾಂಗದವರು ಕೈಜೋಡಿಸಬೇಕು. ಅಲ್ಲದೇ ಸಂಕಷ್ಟದ ನೆರವಿಗೆ ಆಸರೆಯಾಗುತ್ತಿರುವ ಪರಿಷತ್ ಮುಖಂಡರುಗಳ ಕೈಬಲಪಡಿಸಬೇಕು**
>
> –ಹೆಚ್.ಡಿ.ತಮ್ಮಯ್ಯ
> ಶಾಸಕರು

ಮಕ್ಕಳನ್ನು ಅತ್ಯಾಚಾರಗೈದು ಮುಚ್ಚಿಹಾಕುವ ಪ್ರಕರಣಗಳು ಬಲಾಢ್ಯ ಜನಾಂಗವು ಮಾಡುತ್ತಿದೆ. ಅಲ್ಲದೇ ಸಮಾಜದ ವ್ಯವಸ್ಥೆಯು ಬಲಾಢ್ಯರ ಪರವಾಗಿ ನಿಂತಿರುವುದು ದುರ್ದೈವ ಇದನ್ನು ತಡೆಗಟ್ಟಲು ಪರಿಷತ್‌ನ ಸಂಘಟನಾತ್ಮಕ ಶಕ್ತಿಯಿಂದ ಮಾತ್ರ ಸಾಧ್ಯವಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಮಾತನಾಡಿ ಆದಿವಾಸಿ ಜನಾಂಗದವರ ಮೇ ಲೆ ದೌರ್ಜನ್ಯ, ಶೋಷಣೆ ಅಥವಾ ಇನ್ಯಾವುದೇ ಸಂಕಷ್ಟಗಳು ಎದುರಾದರೆ ಕಾನೂನಾತ್ಮಕವಾಗಿ ಪೊಲೀಸ್ ಇಲಾಖೆ ಸದಾ ಜೊತೆಗಿರಲಿದೆ. ಅಲ್ಲದೇ ಬುಡಕಟ್ಟು ಸಮುದಾಯವು ಎಲ್ಲಾ ರೀತಿಯಲ್ಲೂ ಸಹಕಾರವು ಅತ್ಯವಶ್ಯ ಎಂದು ತಿಳಿಸಿದರು.

ಅ.ಭಾ.ಆದಿವಾಸಿ ವಿಕಾಸ ಪರಿಷತ್ ದಕ್ಷಿಣ ಪ್ರಾಂತೀಯ ಅಧ್ಯಕ್ಷ ತಿರುಕೇಶವನ್, ಸದಸ್ಯ ತಿರುಮಾ ಧವನ್, ತಮಿಳುನಾಡು ಅಧ್ಯಕ್ಷ ಡಿ.ಲೋಕನಾಥನ್ ಮಾತನಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಆದಿವಾಸಿ ರಕ್ಷಣಾ ಪರಿಷತ್ ಕಾರ್ಯಾಧ್ಯಕ್ಷ ಮಹಾಂತೇಶ್ ಎಸ್.ಕೌಲಗಿ, ಕಾನೂನು ಸಲಹೆಗಾರ ಡಾ. ಮಧುಕುಮಾರ್, ಕ.ಆ.ರ.ಪರಿಷತ್ ಪ್ರಧಾನ ಕಾರ್ಯದರ್ಶಿ ಪಿ.ರಾಜೇಶ್, ಖಜಾಂಚಿ ಶ್ರೀನಿವಾಸ್‌ಗೌಡ, ಸಂಚಾಲಕ ರಮೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಡೆನೆರಳು ಶಂಕರ್, ಲ್ಯಾಂಪ್ಸ್ ಮಹಾಮಂಡಳ ಅಧ್ಯಕ್ಷ ಬಿ.ಕಾವೇರ, ಹರಿಣಾಶಿಕಾರಿ ಬುಡಕಟ್ಟಿನ ಮುಖಂಡ ಸಿದ್ದಣ್ಣ ಕಾಳೆ, ಹಕ್ಕಿಪಿಕ್ಕಿ ಬುಡಕಟ್ಟು ಮುಖಂಡ ಶಿಕಾರಿ ರಾಮು, ನಿವೃತ್ತ ಅರಣ್ಯ ಸಂರಕ್ಷಣಾಧಿಕಾರಿ ಮಾಣಿಕ್ ಉಪಸ್ಥಿತರಿದ್ದರು.

ಕೋವಿಡ್ ಆತಂಕ: ಜಿಲ್ಲಾಡಳಿತ ಮುಂಜಾಗ್ರತಾ ಕ್ರಮ ವಹಿಸಲು ಮನವಿ

ಚಿಕ್ಕಮಗಳೂರು: ಕಾಫಿನಾಡು ಚಿಕ್ಕಮಗಳೂರಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ನಡುವೆ, ಕೋವಿಡ್ ಆತಂಕ ಸೃಷ್ಟಿಯಾಗಿದೆ. ರಾಜ್ಯದಲ್ಲಿ ನಿನ್ನೆಯವರೆಗೆ ನೂರು ಜನರಲ್ಲಿ ಕೋವಿಡ್ ಸೋಂಕು ಕಾಣಿಸಿಕೊಂಡಿದೆ. ಕಾಫಿನಾಡು ಚಿಕ್ಕಮಗಳೂರು ಅಂದ್ರೆ ಪ್ರವಾಸಿಗರ ಸ್ವರ್ಗ ಹೀಗಾಗಿ ರಾಜ್ಯದ ವಿವಿಧ ಭಾಗಗಳಿಂದ ಹಾಗೂ ದೇಶದ ವಿವಿಧ ರಾಜ್ಯಗಳಿಂದ ಪ್ರತಿನಿತ್ಯ ಹಾಗೂ ವಾರಾಂತ್ಯದಲ್ಲಿ ಸಾವಿರಾರು ಪ್ರವಾಸಿಗರು ಚಿಕ್ಕಮಗಳೂರಿಗೆ ಆಗಮಿಸುತ್ತಾರೆ. ಅದರಲ್ಲೂ ಕೇರಳದಿಂದ ವಾರಾಂತ್ಯದ ದಿನಗಳಲ್ಲಿ ಹತ್ತಾರು ಬಸ್‌ಗಳಲ್ಲಿ ಪ್ರವಾಸಿಗರು ಚಿಕ್ಕಮಗಳೂರಿನ ಪ್ರಕೃತಿ ಸೌಂದರ್ಯವನ್ನು ನೋಡಲು ಬರುತ್ತಾರೆ. ಆದರೆ, ಇದೀಗ ಕೇರಳದಲ್ಲಿ 273 ಕೋವಿಡ್ ಪ್ರಕರಣಗಳು ಬೆಳಕಿಗೆ ಬಂದಿವೆ. ಹೀಗಾಗಿ ಜಿಲ್ಲಾಡಳಿತ ಆರಂಭದಲ್ಲೇ ಮುಂಜಾಗ್ರತಾಕ್ರಮಗಳನ್ನು ಕೈಗೊಳ್ಳಬೇಕಿದೆ. ಜಿಲ್ಲೆಯಲ್ಲಿ ಧಾರಾಕಾರ ಮಳೆ ಆಗುತ್ತಿರುವ ಪರಿಣಾಮ ಪ್ರಕೃತಿ ಸೌಂದರ್ಯವು ಇಮ್ಮಡಿಗೊಂಡಿದೆ, ಹೀಗಾಗಿ ಹೆಚ್ಚಿನ ಪ್ರವಾಸಿಗರು ಕಾಫಿನಾಡಿನತ್ತ ಬರುತ್ತಿದ್ದಾರೆ. ಮಳೆಯ ನಡುವೆ ತಣ್ಣನೆಯ ವಾತಾವರಣದಲ್ಲಿ ಕೋವಿಡ್ ಸೋಂಕು ವೇಗವಾಗಿ ಹರಡುವ ಸಾಧ್ಯತೆ ಇದ್ದು, ಜಿಲ್ಲಾಡಳಿತ ಎಚ್ಚರ ವಹಿಸಬೇಕಿದೆ.

ದಕ್ಷಿಣ ಕನ್ನಡದಲ್ಲಿ ಮುಂದುವರಿದ ಹತ್ಯಾ ಸರಣಿ

ಬಿಜೆಪಿ ಅವಧಿಯಲ್ಲಿ 3, ಕಾಂಗ್ರೆಸ್ ಅವಧಿಯಲ್ಲೂ 3 ಬಲಿ, ಸರ್ಕಾರದ ವೈಫಲ್ಯವೇ?

ಬೆಂಗಳೂರು: ಕೋಮು ಸೂಕ್ಷ್ಮ ಪ್ರದೇಶ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಮಾಯಕರು ಬಲಿಯಾಗುತ್ತಿದ್ದಾರೆ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಕೋಮು ಪ್ರಚೋದಕ ಭಾಷಣಗಳಿಗೂ ಕಡಿವಾಣ ಇಲ್ಲದಂತಾಗಿದೆ. ರಾಜ್ಯದಲ್ಲಿ ಮತೀಯ ಸಂಘರ್ಷಗಳಿಗೆ ಕೊನೆ ಹಾಡುತ್ತೇವೆ ಎಂದು ಹೇಳಿದ್ದ ಸಿಎಂ ಸಿದ್ದರಾಮಯ್ಯ ಸರ್ಕಾರದ 2 ವರ್ಷಗಳ ಅವಧಿಯಲ್ಲಿ ಮೂವರು ಪ್ರಾಣ ಕಳೆದುಕೊಂಡಿದ್ದಾರೆ.

ಪಹಲ್ಗಾಮ್ ದಾಳಿಯ ಸಂದರ್ಭದಲ್ಲಿ ಮಂಗಳೂರಿನಲ್ಲಿ ಅಶ್ರಫ್ ಎಂಬ ಮಾನಸಿಕ ಅಸ್ವಸ್ಥನನ್ನು ಗುಂಪು ಹಲ್ಲೆ ನಡೆಸಿ ಕೊಲೆ ಮಾಡಲಾಗಿತ್ತು. ಇದರ ಬೆನ್ನಲ್ಲೇ ಫಾಝಿಲ್ ಕೊಲೆ ಪ್ರಕರಣದ ಆರೋಪಿ ಸುಹಾಸ್ ಶೆಟ್ಟಿಯನ್ನು ಹತ್ಯೆ ಮಾಡಲಾಯಿತು. ಈ ಎರಡು ಪ್ರಕರಣಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿತ್ತು.

ಅಲ್ಲಲ್ಲಿ ಚೂರಿ ಇರಿತ, ತಲವಾರು ದಾಳಿ ನಡೆದಿದ್ದವು.

ಇದೀಗ ಮತ್ತೊಂದು ಹತ್ಯೆ ಜಿಲ್ಲೆಯ ಶಾಂತಿಯನ್ನು ಕದಡಿಸಿದೆ. ಬಂಟ್ವಾಳದ ಕೊಳತ್ತಮಜಲು ನಿವಾಸಿ ಅಬ್ದುಲ್ ರಹಿಮಾನ್ ಎಂಬ ಯುವಕನನ್ನು ಮಂಗಳವಾರ ಸಂಜೆ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಹತ್ಯೆ ನಡೆಸಿದ್ದಾರೆ.

ಜುಮ್ಮಾ ಮಸೀದಿ ಕಾರ್ಯದರ್ಶಿ ಪಿಕಪ್ ಚಾಲಕ ಅಬ್ದುಲ್ ರಹೀಂ (32) ಹತ್ಯೆ ಮತ್ತು ಕಲಂದರ್ ಶಾಫಿ ಮೇಲಿನ ಕೊಲೆಯತ್ನ ಪ್ರಕರಣ ಸಂಬಂಧಿಸಿ ಸ್ಥಳೀಯ ಇಬ್ಬರು ಸೇರಿ 15 ಮಂದಿಯ ವಿರುದ್ಧ ಬಂಟ್ವಾಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೀಪಕ್ ಮತ್ತು ಸುಮಿತ್ ಸೇರಿ ಒಟ್ಟು ಹಲವರು ಕೃತ್ಯದಲ್ಲಿ ಭಾ–ಗಿಯಾಗಿದ್ದರು ಎಂಬುವುದು ಪ್ರಾಥಮಿಕ ತನಿಖೆಯಿಂದ ಹೊರಬಂದಿದೆ. ಮೇಲ್ನೋಟಕ್ಕೆ ಇದು ಮತೀಯ ಕಾರಣದಿಂದಲೇ ನಡೆದ ಹತ್ಯೆ ಎಂದು ತಿಳಿದು ಬಂದಿದೆ.

ನಿರಂತರ ಕೊಲೆ : ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಅವಧಿಯಲ್ಲೂ ನಿರಂತರವಾಗಿ ಕೊಲೆಗಳು ನಡೆಯುತ್ತಿವೆ. ಬಸವರಾಜ ಬೊಮ್ಮಾಯಿ ಸರ್ಕಾರ ಅವಧಿಯಲ್ಲಿ ಸುಳ್ಯದಲ್ಲಿ ಮಸೂದ್ ಕೊಲೆ ಪ್ರಕರಣ ನಡೆದಿತ್ತು. ಇದಕ್ಕೆ ಪ್ರತೀಕಾರವಾಗಿ ಪ್ರವೀಣ್ ನೆಟ್ಟಾರು ಕೊಲೆಯಾಗಿತ್ತು. ಪ್ರವೀಣ್ ನೆಟ್ಟಾರು ಕೊಲೆಗೆ ಪ್ರತಿಕಾರವಾಗಿ ಫಾಝಿಲ್ ಎಂಬ ಯುವಕನನ್ನು ಹತ್ಯೆ ಮಾಡಲಾಗಿದೆ. ಇದೀಗ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲೂ ಈ ಹತ್ಯಾ ಸರಣಿ ಮುಂದುವರಿದಿದೆ.

ಕಾನೂನು ಸುವ್ಯವಸ್ಥೆ ವಿಫಲ: ರಾಜ್ಯದಲ್ಲಿ ನಿರಂತರವಾಗಿ ಇಂತಹ ಕೃತ್ಯಗಳು ನಡೆಯುತ್ತಿರುವುದು ಜನಸಾಮಾನ್ಯರಲ್ಲಿ ಆತಂಕ ಸೃಷ್ಟಿಸಿದೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂಬ ಆರೋಪಗಳು ಕೇಳಿ ಬರುತ್ತಿವೆ. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕ್ರಮದ ಭರವಸೆಯನ್ನು ನೀಡಿದರೂ ಜಿಲ್ಲೆಯಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಹಾಗೂ ಪ್ರತಿಕಾರದ ಹತ್ಯೆಗಳು ಅಪಾಯಕಾರಿ ಸನ್ನಿವೇಶವನ್ನು ಸೃಷ್ಟಿಸಿದೆ.

ಆ್ಯಂಟಿ ಕಮ್ಯೂನಲ್ ಫೋರ್ಸ್ : ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಸಂಘರ್ಷ ನಿಯಂತ್ರಣಕ್ಕೆ ಆ್ಯಂಟಿ ಕಮ್ಯೂನಲ್ ಫೋರ್ಸ್ ಸ್ಥಾಪನೆ ಮಾಡಲು ಸರ್ಕಾರ ಮುಂದಾಗಿದೆ. ಈ ನಿಟ್ಟಿನಲ್ಲಿ ರೂಪುರೇಷೆ ತಯಾರಿ ಮಾಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಆದರೆ ಇನ್ನೂ ಕಾರ್ಯರೂಪಕ್ಕೆ ಯಾವಾಗ ಬರಲಿದೆ ಎಂಬುವುದು ಸ್ಪಷ್ಟಗೊಂಡಿಲ್ಲ.

ಮಣಿಪುರದಲ್ಲಿ ಹೊಸ ಸರ್ಕಾರ ರಚಿಸಲು 44 ಶಾಸಕರ ಬೆಂಬಲ

ರಾಜ್ಯಪಾಲರ ಭೇಟಿ ಬಳಿಕ ಬಿಜೆಪಿ ನಾಯಕ

ಇಂಫಾಲ್: ಮಣಿಪುರದಲ್ಲಿ ಹೊಸ ಸರ್ಕಾರ ರಚಿಸಲು ನಲವತ್ತನಾಲ್ಕು ಶಾಸಕರ ಬೆಂಬಲ ಇದೆ ಎಂದು ಬಿಜೆಪಿ ಶಾಸಕ ಥೋಕ್ಚೋಮ್ ರಾಧೇಶ್ಯಾಮ್ ಸಿಂಗ್ ಅವರು ಬುಧವಾರ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ ಅವರನ್ನು ಭೇಟಿಯಾದ ನಂತರ ಹೇಳಿದ್ದಾರೆ.

ಸಿಂಗ್ ಮತ್ತು ಇತರ ಒಂಬತ್ತು ಶಾಸಕರು ಇಂದು ರಾಜಭವನಕ್ಕೆ ಭೇಟಿ ನೀಡಿ, ಸರ್ಕಾರ ರಚನೆ ಕುರಿತು ರಾಜ್ಯಪಾಲರೊಂದಿಗೆ ಚರ್ಚಿಸಿದರು.

"ಜನರ ಇಚ್ಛೆಯಂತೆ ಹೊಸ ಸರ್ಕಾರ ರಚಿಸಲು ಬಿಜೆಪಿ ಸಿದ್ಧವಿದೆ. ಇದಕ್ಕೆ ನಲವತ್ತನಾಲ್ಕು ಶಾಸಕರ ಬೆಂಬಲ ಇದೆ. ನಾವು ಇದನ್ನು ರಾಜ್ಯಪಾಲರಿಗೆ ತಿಳಿಸಿದ್ದೇವೆ. ಸರ್ಕಾರ ರಚನೆಯ ಸಮಸ್ಯೆಗೆ ಯಾವ ಪರಿಹಾರಗಳಿವೆ ಎಂಬುದರ ಕುರಿತು ನಾವು ಚರ್ಚಿಸಿದ್ದೇವೆ" ಎಂದು ಸಿಂಗ್ ತಿಳಿಸಿದ್ದಾರೆ.

"ರಾಜ್ಯದ ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳುವುದಾಗಿ ರಾಜ್ಯಪಾಲರು ತಿಳಿಸಿದ್ದಾರೆ" ಎಂದು ಅವರು ಹೇಳಿದರು.

ನೀವು ಸರ್ಕಾರ ರಚಿಸಲು ಹಕ್ಕು ಮಂಡಿಸುತ್ತೀರಾ? ಎಂಬ ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿಂಗ್, ಬಿಜೆಪಿಯ ಕೇಂದ್ರ ನಾಯಕತ್ವವು ಈ ಬಗ್ಗೆ ನಿರ್ಧಾರ

ಮಾಜಿ ಸಿಎಂ ಎನ್. ಬಿರೇನ್ ಸಿಂಗ್

ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದರು.

"ಆದಾಗ